ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೦**

ಒಟ್ಟು ಪ್ರಶ್ನೆಗಳು – ೧೧೫

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಶುಕ್ರವಾರ, ದಿನಾಂಕ: ೦೪ನೇ ಜುಲೈ, ೨೦೧೪**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

1 B/B

## ಜಲ ನಿರ್ಮಲ ಯೋಜನೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೨ (೬೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಲ ನಿರ್ಮಲ ಯೋಜನೆಯಡಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ;

(ಆ) ಈ ಯೋಜನೆಯ ಯೋಜನಾ ವರದಿ, ಕ್ರಿಯಾ ವರದಿ ಅಂದಾಜು ಪಟ್ಟಿಯ ವಿವರ ನೀಡುವುದು ;

(ಇ) ಈ ಯೋಜನೆಯಲ್ಲಿ ನಡೆದ ಅವ್ಯವಹಾರದ ವಿರುದ್ಧ ಲೋಕಾಯುಕ್ತ ಇನ್ಯಾವುದೇ ಇಲಾಖಾ ತನಿಖಾದಲ್ಲಿ ಆಗಿರುವ ದೂರುಗಳೆಷ್ಟು ; ಇದಕ್ಕೆ ಸಂಬಂಧಿಸಿದಂತೆ ಇಲಾಖೆ ಗುತ್ತಿಗೆದಾರರ ಮೇಲೆ ಅಥವಾ ಕಾರ್ಯನಿರ್ವಹಿಸಿದ ಇಂಜಿನಿಯರ್ ವಿರುದ್ಧ ಕೈಗೊಂಡ ಕ್ರಮವೇನು ;

(ಈ) ಈ ಮಹಾತ್ವಕಾಂಕ್ಷಿ ಯೋಜನೆ ಹೊರದೇಶದ ಧನಸಹಾಯ ಪಡೆದು ಫಲಾನುಭವಿಗಳಿಗೆ ಯಾವುದೇ ರೀತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಸಾಧ್ಯವಾಗದಿದ್ದಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ?

## ಸ್ವಾವಲಂಬಿ ಯೋಜನೆಯ ಅಡಿಯಲ್ಲಿ ಕೌಶಲ್ಯ ತರಬೇತಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೩ (೬೮೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕೌಶಲ್ಯ ತರಬೇತಿ ಹಾಗೂ ಸ್ವಾವಲಂಬಿ ಯೋಜನೆಯ ಅಡಿಯಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿದೆ ;

(ಆ) ತರಬೇತಿ ನೀಡಿದ ಸಂಸ್ಥೆಯ ಹೆಸರು ಮತ್ತು ತರಬೇತಿಯ ಖರ್ಚು ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ?

## ವಿಶೇಷ ಘಟಕ ಯೋಜನೆಯಡಿ ನೀಡಿರುವ ಪ್ರವಾಸಿ ಟ್ಯಾಕ್ಸಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೪ (೬೭೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗಗಳಿಗೆ ವಿಶೇಷ ಘಟಕ ಯೋಜನೆಯಡಿ ನೀಡಿರುವ ಪ್ರವಾಸಿ ಟ್ಯಾಕ್ಸಿಗಳ ಸಂಖ್ಯೆ ಎಷ್ಟು ;

(ಆ) ಈ ಜಿಲ್ಲೆಗಳಲ್ಲಿ ಯಾವ ಯಾವ ಫಲಾನುಭವಿಗಳಿಗೆ ನೀಡಲಾಗಿದೆ (ವಿವರ ನೀಡುವುದು) ?

## ೨೦೧೩–೧೪ನೇ ಸಾಲಿಗೆ ನಿಗದಿಪಡಿಸಿರುವ ಅನುದಾನ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೫ (೬೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸರ್ಕಾರದ ವತಿಯಿಂದ ೨೦೧೩–೧೪ನೇ ಸಾಲಿಗೆ ನಿಗಧಿಪಡಿಸಿರುವ ಅನುದಾನವೆಷ್ಟು ;

(ಆ) ಈ ಒಟ್ಟು ಅನುದಾನದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ವಿಶೇಷ ಘಟಕ ಯೋಜನೆಯಡಿ ನಿಗಧಿ ಮಾಡಿರುವ ಅನುದಾನದ ಮೊತ್ತ ಎಷ್ಟು ;

(ಇ) ೨೦೧೩–೧೪ನೇ ಸಾಲಿನಲ್ಲಿ ಇದುವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಯಾವ ಯಾವ ಸಂಘ ಸಂಸ್ಥೆಗಳಿಗೆ ಎಷ್ಟೆಷ್ಟು ಹಣವನ್ನು ನೀಡಲಾಗಿದೆ (ವಿವರ ನೀಡುವುದು) ?

## N.R.E.W.E ಕಾಮಗಾರಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೬ (೬೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯ ಶಿರಸಿ ವಿಭಾಗದಲ್ಲಿ N.R.E.W.E ಕಾಮಗಾರಿ ಯೋಜನೆ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳ ವಿವರ, ಗುತ್ತಿಗೆದಾರರ ವಿವರಗಳ ಮೊತ್ತದ ಕಳೆದ ಐದು ವರ್ಷದ ಮಾಹಿತಿ ನೀಡುವುದು ;

(ಆ) N.R.E.W.E ಈ ಯೋಜನೆಯ ಯೋಜನಾ ವರದಿ ಹಾಗೂ ಅಂದಾಜು ಪ್ರತಿ ಅದಕ್ಕೆ ಪೂರಕವಾದ ಪೈಪ್ ಹಾಗೂ ನೀರಿನ ಟ್ಯಾಂಕ್, ಪಂಪ್ ಡಿಸೈನ್ ಪ್ರತಿ ನೀಡುವುದು ;

(ಇ) ಈ ಎಲ್ಲಾ ಯೋಜನೆಗಳ ಕಾಮಗಾರಿಗಳ ಹಣ ಪಾವತಿಸುವ ಮೊದಲು ಶಿರಸಿ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪರಿಶೀಲನೆ ಮಾಡಿದ ಹಾಗೂ ಕಾಮಗಾರಿಗಳ ಗುಣಮಟ್ಟ ಪ್ರತಿ ನೀಡುವುದು ;

(ಈ) ಈ ಕಾಮಗಾರಿಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾದ ಬಿಲ್ ಹಾಗೂ ಎಂ.ಬಿ. ಪ್ರತಿಗಳನ್ನು ನೀಡಲಾಗುವುದೇ ?

## ಮಹಿಳಾ ಆಯೋಗದ ಅಧ್ಯಕ್ಷರ ನೇಮಕ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೨೭ (೬೮೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರನ್ನು ಎಂದು ನೇಮಕ ಮಾಡಲಾಗುವುದು ;

(ಆ) ಮಹಿಳಾ ಆಯೋಗದ ಕರ್ತವ್ಯ ಹಾಗೂ ಹೊಣೆಗಾರಿಕೆಯೇನು (ವಿವರ ನೀಡುವುದು) ;

(ಇ) ಮಹಿಳಾ ಆಯೋಗದಲ್ಲಿ ತನಿಖೆಗೆ ಬಾಕಿಯಿರುವ ಪ್ರಕರಣಗಳೆಷ್ಟು (ವಿವರ ನೀಡುವುದು) ?

## ಸರ್ಕಾರದ ಸಾಧನೆಗಳು ಪತ್ರಿಕೆಗಳಲ್ಲಿ ಜಾಹೀರಾತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೨೮ (೬೮೪) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ತನ್ನ ಸಾಧನೆಯ ಬಗ್ಗೆ ಪತ್ರಿಕೆಗಳಿಗೆ ನೀಡಿರುವ ಜಾಹೀರಾತು ಸಂಖ್ಯೆ ಎಷ್ಟು ; ಸರ್ಕಾರದ ಸಾಧನೆಯನ್ನು ಪ್ರಚುರಪಡಿಸುವಲ್ಲಿ ಯಾವ ಯಾವ ಪತ್ರಿಕೆಗಳಿಗೆ ಮತ್ತು ಸುದ್ದಿವಾಹಿನಿಗಳಿಗೆ ಜಾಹೀರಾತು ನೀಡಿದೆ ;

(ಆ) ಇಲ್ಲಿಯವರೆಗೆ ಕೊಟ್ಟ ಜಾಹೀರಾತಿಗಾಗಿ ಖರ್ಚು ಮಾಡಿದ ಒಟ್ಟು ಹಣವೆಷ್ಟು (ಇಲಾಖಾವಾರು, ಪತ್ರಿಕೆವಾರು ಪ್ರತ್ಯೇಕ ಮಾಹಿತಿ ನೀಡುವುದು) ?

## ಭಾಗ್ಯಲಕ್ಷ್ಮಿ ಯೋಜನೆಗೆ ವಿವಾಹ ನೋಂದಣಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೨೯ (೭೭೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾಗ್ಯಲಕ್ಷ್ಮಿ ಯೋಜನೆ ಪಡೆಯುವ ಬಡ ಹೆಣ್ಣು ಮಕ್ಕಳ ತಂದೆ ತಾಯಿಯವರ ವಿವಾಹ ಕಡ್ಡಾಯ ನೋಂದಣಿಯಾಗಬೇಕೆಂಬ ಸರ್ಕಾರದ ಆದೇಶದಿಂದ ಬಡವರು ತೊಂದರೆ ಅನುಭವಿಸುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಆರ್ಥಿಕವಾಗಿ ಬಡವರು, ದಲಿತರು, ಹಿಂದುಳಿದ ವರ್ಗದವರು ಈ ಆದೇಶದಿಂದ ಸೌಲಭ್ಯ ವಂಚಿತರಾಗುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಈ ಆದೇಶವನ್ನು ಹೊರಡಿಸಲು ಸರ್ಕಾರಕ್ಕೆ ಅಗತ್ಯವಿದ್ದಿತೆ ;

(ಈ) ಸದರಿ ಆದೇಶದ ಗೊಂದಲದ ಪರಿಸ್ಥಿತಿಯನ್ನು ಗಮನಿಸಿ ಆದೇಶವನ್ನು ಸರ್ಕಾರ ಹಿಂಪಡೆಯುವುದೇ (ವಿವರ ನೀಡುವುದು) ?

## ದಿ॥ ವಡ್ಡರಸೆ ರಘುರಾಮ ಶೆಟ್ಟಿಯವರ ಹೆಸರಿನಲ್ಲಿ ಪ್ರಶಸ್ತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೩೦ (೭೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖ್ಯಾತ ಸಾಹಿತಿ, ಶ್ರೇಷ್ಠ ಪತ್ರಕರ್ತ ಕರಾವಳಿ ಜಿಲ್ಲೆಯ ದಿ॥ ವಡ್ಡರಸೆ ರಘುರಾಮ ಶೆಟ್ಟಿಯವರ ಹೆಸರಿನಲ್ಲಿ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ ವ್ಯಕ್ತಿಗಳಿಗೆ ಸರ್ಕಾರದ ವತಿಯಿಂದ ಪ್ರಶಸ್ತಿ ನೀಡುವ ಪ್ರಸ್ತಾವನೆ ಹಿಂದಿನ ಸರ್ಕಾರದ ಮುಂದಿದ್ದು ಇದನ್ನು ಕಾರ್ಯರೂಪಕ್ಕೆ ತರುವ ಬಗ್ಗೆ ಸರ್ಕಾರ ಏನು ಕ್ರಮಕೈಗೊಳ್ಳಲಿದೆ ;

(ಆ) ದಿ॥ ವಡ್ಡರಸೆ ರಘುರಾಮ ಶೆಟ್ಟಿ ಇವರ ಹುಟ್ಟೂರಿನಲ್ಲಿ ಅವರ ಸ್ಮರಣಾರ್ಥ ಸ್ಮಾರಕ ಭವನವೊಂದನ್ನು ನಿರ್ಮಿಸುವ ಬಗ್ಗೆ ಸರ್ಕಾರ ಕಾರ್ಯಾರಂಭ ಮಾಡಲಿದೆಯೇ ;

(ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣವಾದ ಮಾಹಿತಿ ನೀಡುವುದು) ?

## A.D. Bank ಅಡಿ ಅನುದಾನ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೧ (೬೮೭) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೨ನೇ ಪಂಚವಾರ್ಷಿಕ ಯೋಜನೆಯಡಿಯಲ್ಲಿ ADB (Asian Develop Bank) ಯಿಂದ ಮೂಲಭೂತ ಸೌಕರ್ಯ ಅಭಿವೃದ್ಧಿ ಅಡಿಯಲ್ಲಿ ರಾಜ್ಯಕ್ಕೆ ಬಂದ ಅನುದಾನವೆಷ್ಟು; ಬಂದ ಹಣವನ್ನು ಯಾವ ಯಾವ ಮೂಲಭೂತ ಸೌಕರ್ಯಕ್ಕೆ ಉಪಯೋಗಿಸಲಾಗಿದೆ ;

(ಆ) ಬೆಂಗಳೂರು-ದೆಹಲಿ, ಬೆಂಗಳೂರು-ಮುಂಬೈಗೆ High Speed Rail ಬಗ್ಗೆ ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಬೇಡಿಕೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದರೆ, ಯಾವಾಗ ಸಲ್ಲಿಸಲಾಯಿತು ; ಇದರ ಬಗ್ಗೆ ಕೇಂದ್ರದಿಂದ ಸಹಮತ ಸಿಕ್ಕಿರುವುದೇ ; ಬೇಡಿಕೆ ಸಲ್ಲಿಸದಿದ್ದರೆ ಕಾರಣವೇನು ; ಕೇಂದ್ರದಲ್ಲಿ ರಾಜ್ಯದವರೇ ಕೇಂದ್ರ ರೈಲ್ವೆ ಸಚಿವರಿರುವುದರಿಂದ ಸದರಿ High Speed Railway ಯೋಜನೆಯನ್ನು ADB ಸಹಕಾರದೊಂದಿಗೆ ಮಂಡಿಸಲು ರಾಜ್ಯದಿಂದ ಒತ್ತಡ ತರಬಹುದಲ್ಲವೇ ?

## ಕ್ರೀಡಾಂಗಣ ಮತ್ತು ರೈತರ ಫಸಲು ಒಕ್ಕಣೆ ಕಣ ನಿರ್ಮಾಣ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೨ (೭೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಇಲಾಖೆಯಿಂದಲೇ ಪ್ರತಿ ಪಂಚಾಯತಿಯಲ್ಲಿ ಕ್ರೀಡಾಂಗಣ ನಿರ್ಮಿಸುವುದಾಗಿ ಹೇಳಲಾಗಿದ್ದು, ೨೦೧೩–೧೪ರಲ್ಲಿ ಎಷ್ಟು ಪಂಚಾಯಿತಿಯಲ್ಲಿ ಕ್ರೀಡಾಂಗಣ ನಿರ್ಮಿಸಲಾಗಿದೆ ; ೨೦೧೩–೧೪ರಲ್ಲಿ ಹಾಗೂ ೨೦೧೪–೧೫ರಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ರೈತರಿಗೆ ಅನುಕೂಲವಾಗಲೆಂದು "ಕಣ" ನಿರ್ಮಾಣ ಮಾಡಲಾಗಿದೆಯೇ ; ಮಾಡಿದ್ದರೆ ಎಷ್ಟು ಕಣ ನಿರ್ಮಿಸಲಾಗಿದೆ (ಜಿಲ್ಲಾವಾರು ವಿವರ ನೀಡುವುದು) ; ಕಣ ನಿರ್ಮಾಣ ಮಾಡಲು ಇಲಾಖೆಯಿಂದ ಬಿಡುಗಡೆ ಮಾಡಿದ ಹಣವೆಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಇ) ೨೦೧೨–೧೩ ಹಾಗೂ ೨೦೧೩–೧೪ರಲ್ಲಿ ಮಂಡ್ಯ ಜಿಲ್ಲೆಯಲ್ಲಿ ಆಯ್ಕೆಯಾದ ಸುವರ್ಣ ಗ್ರಾಮಗಳು ಎಷ್ಟು; ಆಯ್ಕೆಯಾದ ಸುವರ್ಣ ಗ್ರಾಮಗಳ ಕಾಮಗಾರಿ ಪೂರ್ಣವಾಗಿರುವ ಗ್ರಾಮಗಳ ವಿವರ ಮತ್ತು ಪ್ರತಿ ಗ್ರಾಮಕ್ಕೆ ಖರ್ಚು ಮಾಡಿದ ವಿವರಗಳನ್ನು ನೀಡುವುದು ;

(ಈ) ಸುವರ್ಣ ಗ್ರಾಮಕ್ಕೆ ಆಯ್ಕೆಯಾದ ಗ್ರಾಮಗಳಲ್ಲಿ ಇನ್ನೂ ಕೆಲಸ ಪ್ರಾರಂಭವಾಗದೇ ಇರುವ ಗ್ರಾಮಗಳೆಷ್ಟು ; ಪ್ರಾರಂಭಿಸದಿರಲು ಕಾರಣವೇನು ;

(ಉ) ಸುವರ್ಣ ಗ್ರಾಮಗಳಿಗೆ ಬಿಡುಗಡೆಯಾದ ಹಣವೆಷ್ಟು (ವರ್ಷವಾರು ವಿವರ ನೀಡುವುದು) ?

## ವಿದ್ಯಾರ್ಥಿಗಳಿಗೆ ಬೈಸಿಕಲ್ ವಿತರಿಸಲು ಟೆಂಡರ್

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೩ (೭೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸೈಕಲ್ ವಿತರಿಸಲು ಟೆಂಡರ್ ಕರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸೈಕಲ್‌ಗಳ ಗುಣಮಟ್ಟದ ಬಗ್ಗೆ ಸರ್ಕಾರದ ನಿಲುವೇನು (ಭಾಗವಹಿಸಿದ ಸಂಸ್ಥೆಗಳ ವಿವರ ನೀಡುವುದು) ;

(ಆ) ಹೆಚ್ಚುವರಿ ಕಂಪನಿಗಳು ಟೆಂಡರನಲ್ಲಿ ಭಾಗವಹಿಸುವ ಕಾರಣಕ್ಕೆ ಯಾವುದಾದರೂ ನಿಬಂಧನೆಗಳನ್ನು ಬದಲಾಯಿಸುವಂತೆ ಸರ್ಕಾರವನ್ನು ಕೋರಲಾಗಿತ್ತೆ ;

(ಇ) ಈ ಸಾಲಿನ ಸೈಕಲ್ ಖರೀದಿಗೆ ಮಾಡಲಾದ ವೆಚ್ಚದ ವಿವರವನ್ನು ನೀಡುವುದು ; ಪ್ರತಿ ಸೈಕಲ್ ದರ, ವಿತರಿಸಿದ ಕಂಪನಿಗಳ ವಿವರ ಹಾಗೂ ಈ ಸಾಲಿನಲ್ಲಿ ಒಟ್ಟು ವಿತರಣೆಯಾದ ಸೈಕಲ್‌ಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಯಾವ ಯಾವ ಕಂಪನಿಗಳು ಸೈಕಲ್ ವಿತರಿಸಲು ಆಯ್ಕೆಯಾಗಿದ್ದವು ;

(ಉ) ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ೨೦೧೪–೧೫ನೇ ಸಾಲಿಗೆ ವಿತರಿಸಲಾದ ಕಂಪ್ಯೂಟರ್‌ಗಳ ವಿವರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ; ಟೆಂಡರ್‌ನಲ್ಲಿ

ಎಷ್ಟು ಹಾಗೂ ಯಾವ–ಯಾವ ಸಂಸ್ಥೆಗಳು ಭಾಗವಹಿಸಿದ್ದವು ; ರಾಜ್ಯದಲ್ಲಿ ಒಟ್ಟು ವಿತರಣೆಯಾದ ಕಂಪ್ಯೂಟರ್‌ಗಳ ಸಂಖ್ಯೆ ಹಾಗೂ ಗುಣಮಟ್ಟದ ಬಗ್ಗೆ ಸರ್ಕಾರದ ನಿಲುವೇನು ?

## ಶಾಸ್ತ್ರೀಯ ಭಾಷಾ ಅಧ್ಯಯನ ಕೇಂದ್ರದ ಕಾರ್ಯಯೋಜನೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೪ (೭೮೧೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತ ನಂತರ ಶಾಸ್ತ್ರೀಯ ಭಾಷಾ ಅಧ್ಯಯನ ಕೇಂದ್ರ ಇದುವರೆವಿಗೂ ಯಾವ ರೀತಿ ಕಾರ್ಯಯೋಜನೆ ಹಮ್ಮಿಕೊಂಡಿದೆ ;

(ಆ) ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಶಾಸ್ತ್ರೀಯ ಅಧ್ಯಯನ ಕೇಂದ್ರಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು (ಪ್ರತ್ಯೇಕ ವಿವರದೊಂದಿಗೆ) ;

(ಇ) ಯಾವ ಯಾವ ಯೋಜನೆಗಳಿಗೆ ಖರ್ಚು ಮಾಡಲಾಗಿದೆ (ವಿವರದೊಂದಿಗೆ) ;

(ಈ) ಭಾಷಾ ಸಂಶೋಧನೆ ಬಗ್ಗೆ ತೆಗೆದು ರೂಪಿಸಿರುವ ಯೋಜನೆಗಳೇನು ; ಯಾವ ಯಾವ ಕೃತಿಗಳ ರಚನೆ ಮಾಡಿದೆ ; ಎಷ್ಟು ಭಾಷಾಂತರ ಕಾರ್ಯ ಹಾಗೂ ಚಟುವಟಿಕೆ ನಡೆಸಲಾಗಿದೆ ;

(ಉ) ಕನ್ನಡ ಭಾಷೆಯೊಂದಿಗೆ ಬೇರೆ ಭಾಷೆಗಳ ಸಂಬಂಧ ಮತ್ತು ಚಟುವಟಿಕೆ ಬಗ್ಗೆ ರೂಪಿಸಲಾಗಿರುವ ಯೋಜನೆಗಳೇನು ;

(ಊ) ರಾಜ್ಯ ಭಾಷಾ ಕಲೆ, ಸಾಹಿತ್ಯ, ಪುರಾತತ್ವ, ಶಾಸನ ಶಾಸ್ತ್ರ, ರಚನೆಗೆ ಸಂಬಂಧಪಟ್ಟಂತೆ ತೆಗೆದುಕೊಂಡಿರುವ ಕ್ರಮಗಳೇನು ;

(ಋ) ಶಾಸ್ತ್ರೀಯ ಕೇಂದ್ರಕ್ಕೆ ನೇಮಕ ಮಾಡಿರುವ ಯೋಜನಾ ನಿರ್ದೇಶಕರು ಯಾರು ; ಯಾವಾಗ ನೇಮಕ ಮಾಡಲಾಯಿತು ?

## ಕುಡಿಯುವ ನೀರಿನ ಸಮಸ್ಯೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೫ (೬೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು, ಮಾಯಸಂದ್ರ ಹೋಬಳಿಯ ನಾಗೇಗೌಡನ ಪಾಳ್ಯ, ಎನ್.ಜಿ. ಬ್ಯಾಲ ಗೊಲ್ಲರಹಟ್ಟಿ, ಶೆಟ್ಟರ ಪಾಳ್ಯ, ಆರ್.ಎಸ್. ಪಾಳ್ಯ ಗ್ರಾಮಗಳು ಕುಡಿಯುವ ನೀರಿಲ್ಲದೆ ತೀರ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ಸಾರ್ವಜನಿಕರ ದೂರುಗಳಿಗೆ ಸ್ಪಂದಿಸದೇ ಇರುವುದನ್ನು ಸರ್ಕಾರ ಗಮನಿಸಿದೆಯೇ ?

## ವಿಫಲ ತೆರೆದ ಕೊಳವೆ ಬಾವಿಗಳ ಮುಚ್ಚುವ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೬ (೬೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕುಡಿಯುವ ನೀರಿಗಾಗಿ, ಕೃಷಿ ಉದ್ದೇಶಕ್ಕಾಗಿ ಕೊರೆದ ಕೊಳವೆ ಬಾವಿಗಳು ನೀರು ಬರದೆ ವಿಫಲವಾದಾಗ ಅವುಗಳನ್ನು ಸಮರ್ಪಕವಾಗಿ ಮುಚ್ಚದೇ ಹಾಗೇ ಬಿಟ್ಟಿರುವ ದುರಂತಗಳಿಗೆ ಕಾರಣವಾಗುವ ಲಕ್ಷಾಂತರ ತೆರೆದ ಕೊಳವೆ ಬಾವಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿಫಲ ತೆರೆದ ಕೊಳವೆ ಬಾವಿಗಳನ್ನು ಮುಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೫೩೭ (೬೮೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನ ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ ನಿರ್ವಹಣೆಗೆ ಸರ್ಕಾರದಿಂದ ನೀಡಲಾಗುವ ನಿರ್ವಹಣಾ ವೆಚ್ಚವೆಷ್ಟು ; ಮತ್ತು ಈ ನಿರ್ವಹಣಾ ವೆಚ್ಚವನ್ನು ನೀಡಲು ಇರುವ ಮಾನದಂಡವೇನು ;

(ಆ) ತುಮಕೂರು ಜಿಲ್ಲೆಯಾದ್ಯಂತ ಕುಡಿಯುವ ನೀರು ಪೂರೈಸುವ ನಿರ್ವಹಣೆ ಹೇಗೆ ನಡೆಯುತ್ತಿದೆ (ತಾಲ್ಲೂಕುವಾರು ವಿವರ ನೀಡುವುದು) ?

## ಗ್ರಾಮೀಣ ಮಕ್ಕಳ ಶಿಕ್ಷಣ ಗುಣಮಟ್ಟ ಸುಧಾರಣೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೫೩೮ (೬೯೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ನಗರ ಪ್ರದೇಶಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಶಿಕ್ಷಣ ಗುಣಮಟ್ಟಕ್ಕೆ, ಗ್ರಾಮೀಣ ಶಾಲೆಯ ಶಿಕ್ಷಣ ಗುಣಮಟ್ಟವನ್ನು ಸರಿದೂಗಿಸುವ, ಗ್ರಾಮೀಣ ಮಕ್ಕಳ ಶೈಕ್ಷಣಿಕ ಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಸಂಕ್ಷಿಪ್ತ ವರದಿ ನೀಡುವುದು) ?

## ವಿಮಾನ ನಿಲ್ದಾಣ ಕಾಮಗಾರಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೩೯ (೭೮೯) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರ್ಗಿಯಲ್ಲಿ ನಿರ್ಮಾಣವಾಗುತ್ತಿರುವ ವಿಮಾನ ನಿಲ್ದಾಣದ ಕಾಮಗಾರಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಾರಣಗಳನ್ನು ವಿವರಿಸುವುದು ;

(ಆ) ಈ ವಿಮಾನ ನಿಲ್ದಾಣಕ್ಕಾಗಿ ಯಾವ ವರ್ಷ ಎಷ್ಟು ಜಮೀನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಇದಕ್ಕಾಗಿ ಇಲ್ಲಿಯವರೆಗೆ ಮಾಡಿರುವ ಖರ್ಚು ಎಷ್ಟು ;

(ಇ) ಈ ನಿಲ್ದಾಣದ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ; ಈಗಾಗಲೇ ಯಾವ ಯಾವ ಕಾಮಗಾರಿ ಪೂರ್ಣಗೊಂಡಿವೆ ; ಇನ್ನೂ ನಿರ್ವಹಿಸಬೇಕಾಗಿರುವ ಕಾಮಗಾರಿಗಳ ವಿವರಗಳನ್ನು ನೀಡುವುದು ;

(ಈ) ಸ್ಥಗಿತಗೊಂಡಿರುವ ಕಾಮಗಾರಿ ಪುನರಾರಂಭಿಸುವುದಕ್ಕೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಸಮಗ್ರ ಮಾಹಿತಿ ನೀಡುವುದು) ?

## ಸುವರ್ಣ ಗ್ರಾಮೋದಯ ಯೋಜನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೪೦ (೭೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್, ಗುಲ್ಬರ್ಗಾ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನ ಎಷ್ಟು ಗ್ರಾಮಗಳಲ್ಲಿ 'ಸುವರ್ಣ ಗ್ರಾಮೋದಯ ಯೋಜನೆ'

ಮಂಜೂರು ಮಾಡಲಾಗಿದೆ (ತಾಲ್ಲೂಕುವಾರು ಮಾಹಿತಿ ಒದಗಿಸುವುದು) ;

(ಆ) ಈ ಯೋಜನೆಗಳ ಅಂದಾಜು ಮೊತ್ತ ಎಷ್ಟು ; ಇದುವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚು ಮಾಡಿರುವ ಹಣವೆಷ್ಟು (ತಾಲ್ಲೂಕುವಾರು ಮಾಹಿತಿ ಒದಗಿಸುವುದು) ;

(ಇ) ಈಗಾಗಲೇ ಈ ಯೋಜನೆ ಕಾಮಗಾರಿಗಳನ್ನು ಎಷ್ಟು ಗ್ರಾಮಗಳಲ್ಲಿ ಪೂರ್ಣಗೊಳಿಸಲಾಗಿದೆ ; ಬಾಕಿ ಉಳಿದಿರುವ ಗ್ರಾಮಗಳೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಈ) ಕಳೆದ ೨೦೧೩–೧೪ನೇ ಸಾಲಿನಲ್ಲಿ ಈ ಯೋಜನೆಗೆ ಒದಗಿಸಲಾಗಿರುವ ಹಣ ಎಷ್ಟು ; ಬಿಡುಗಡೆಯಾಗಿರುವ ಅನುದಾನ ಎಷ್ಟು ; ಖರ್ಚಾಗಿರುವ ಹಣ ಎಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಉ) ಪ್ರಸಕ್ತ ೨೦೧೪–೧೫ನೇ ಸಾಲಿನ ಬಜೆಟ್‌ನಲ್ಲಿ ಒದಗಿಸಲಾಗಿರುವ ಅನುದಾನ ಎಷ್ಟು ; ಈಗಾಗಲೇ ಬಿಡುಗಡೆಯಾಗಿರುವ ಹಣವೆಷ್ಟು (ಜಿಲ್ಲಾವಾರು ಮಾಹಿತಿ ಒದಗಿಸುವುದು) ?

## ಅಗ್ಗದ ಮದ್ಯ ತಯಾರಿಕೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೪೧ (೭೬೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಬಕಾರಿ ಇಲಾಖೆಯಿಂದ ಮದ್ಯ ಮಾರಾಟ ಮಾಡಲು ಯಾವ ವಿಧದ ಲೈಸನ್ಸ್‌ಗಳನ್ನು ನೀಡಲಾಗುತ್ತದೆ ; ಲೈಸನ್ಸ್ ನೀಡಲು ಇರುವ ಮಾನದಂಡಗಳೇನು ; ಅವುಗಳು ಯಾವುವು (ವಿವರಿಸುವುದು) ;

(ಆ) ಹೈ–ಕ ಭಾಗದಲ್ಲಿ ಅಗ್ಗದ ಮದ್ಯ ತಯಾರಿಕೆ ಮತ್ತು ಮಾರಾಟ ಮಾಡಲು ಅನುಮತಿ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಜಿಲ್ಲೆ/ ತಾಲ್ಲೂಕುಗಳಿಗೆ ನೀಡಲಾಗಿದೆ (ವಿವರಿಸುವುದು) ;

(ಇ) ಅಗ್ಗದ ಮದ್ಯ ಮಾರಾಟ ಮತ್ತು ಕಳ್ಳಭಟ್ಟಿ ತಯಾರಿಕೆಯಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದಿಲ್ಲವೆ ; ಅವುಗಳ ಕಡಿವಾಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು (ವಿವರಿಸುವುದು) ;

(ಈ) ಇಲ್ಲಿಯವರೆಗೆ ಕಳ್ಳಭಟ್ಟಿ ಸೇವನೆಯಿಂದ ಮೃತ ಪಟ್ಟವರ ಸಂಖ್ಯೆ ಎಷ್ಟು ; ಅಂತಹ ತಯಾರಿಕಾ ಘಟಕಗಳ ಮೇಲೆ ಸರ್ಕಾರ ಜರುಗಿಸಿದ ಕ್ರಮಗಳೇನು (ವಿವರಿಸುವುದು) ?

## ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೪೨ (೬೯೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಕೇಂದ್ರ ಸ್ಥಾನವಾಗಿರುವ ಕಲಬುರ್ಗಿಯಲ್ಲಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದಿದೆಯೇ;

(ಆ) ಈ ಕುರಿತು ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರು ಜಮೀನಿಗಾಗಿ ಕಲಬುರ್ಗಿ ಜಿಲ್ಲಾ ಆಡಳಿತದೊಂದಿಗೆ ಪತ್ರ ವ್ಯವಹಾರ ನಡೆಸಿರುವರೇ; (ನಡೆಸಿದ್ದರೆ ವಿವರಗಳನ್ನು ನೀಡುವುದು)

(ಇ) ಹಿಂದುಳಿದ ಪ್ರದೇಶದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ ದೊರೆಯುವಂತೆ ಮಾಡಲು ರಾಜ್ಯ ಸರ್ಕಾರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡಲಿದೆಯೇ?

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನದ ಯೋಜನೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೪೩ (೬೯೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರೀಕರ ವ್ಯಾಪ್ತಿಯಲ್ಲಿ ಬರುವ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಯೋಜನೆ ಕಾರ್ಯವ್ಯಾಪ್ತಿ ಏನು; (ಯೋಜನಾವಾರು ವಿವರ ಒದಗಿಸುವುದು)

(ಆ) ಸದರಿ ಇಲಾಖೆಯು ವತಿಯಿಂದ ಹಾವೇರಿ ಜಿಲ್ಲೆಯಲ್ಲಿ ೨೦೧೦ರಿಂದ ಇಲ್ಲಿಯವರೆಗೆ ಅನುಷ್ಠಾನ ಮಾಡಿದ ಯೋಜನೆಗಳಾವುವು; (ಯೋಜನಾವಾರು ವಿವರ ಒದಗಿಸುವುದು)

(ಇ) ಪ್ರಗತಿಯಲ್ಲಿರುವ ಯೋಜನೆಗಳಾವುವು; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು; (ಯೋಜನಾವಾರು ವಿವರ ಒದಗಿಸುವುದು)

(ಈ) ಜಿಲ್ಲೆಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು; ಅವುಗಳ ಕಾರ್ಯವ್ಯಾಪ್ತಿ ಏನು? (ಯೋಜನಾವಾರು ವಿವರ ಒದಗಿಸುವುದು)

2 B/B

## ಕಿವುಡ ಹಾಗೂ ಮೂಕ ಮಕ್ಕಳ ಶಾಲೆಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೫೪೪ (೬೯೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ ಜಿಲ್ಲೆಯಲ್ಲಿ ಕಿವುಡ ಮತ್ತು ಮೂಕ ಮಕ್ಕಳ ಶಾಲೆಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ಈ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು;

(ಇ) ಈ ಮಕ್ಕಳಿಗೆ ಸರ್ಕಾರದಿಂದ ಮಾಸಾಶನವನೆನ್ನಾದರೂ ನೀಡಲಾಗುತ್ತಿದೆಯೇ;

(ಈ) ಹಾಗಿದ್ದಲ್ಲಿ, ಎಷ್ಟು ಮೊತ್ತದ ಮಾಸಾಶನವನ್ನು ನೀಡಲಾಗುತ್ತಿದೆ;

(ಉ) ಈಗ ನೀಡುತ್ತಿರುವ ಮಾಸಾಶನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಊ) ಹಾಗಿದ್ದಲ್ಲಿ ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು; ಹಾಗೂ ಯಾವಾಗಿನಿಂದ ಜಾರಿಗೆ ತರಲಾಗುವುದು;

(ಋ) ಈ ಶಾಲೆಗಳಲ್ಲಿ ಪರಿಣಿತ ಶಿಕ್ಷಕರುಗಳನ್ನು ನೇಮಿಸಿಕೊಳ್ಳಲಾಗಿದೆಯೇ?

## ಉದ್ಯೋಗ ಖಾತ್ರಿ ಯೋಜನೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೪೫ (೬೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳಿವೆ; ಆ ಗ್ರಾಮ ಪಂಚಾಯಿತಿಗಳು ಯಾವುವು ಮತ್ತು ಎಷ್ಟು;

(ಆ) ಯಾವ ಯಾವ ಗ್ರಾಮ ಪಂಚಾಯಿತಿಯಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಮತ್ತು ಇನ್ನಿತರ ಯೋಜನೆಯಲ್ಲಿ ಅವ್ಯವಹಾರವಾಗಿರುತ್ತದೆ; ಮತ್ತು ಎಷ್ಟು ಅನುದಾನ ಅವ್ಯವಹಾರವಾಗಿರುತ್ತದೆ; (ಜಿಲ್ಲಾವಾರು, ಪಂಚಾಯಿತಿವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಅವ್ಯವಹಾರ ಮಾಡಿರತಕ್ಕಂತ ಅಧಿಕಾರಿಗಳಿಗೆ ಮತ್ತು ಸದಸ್ಯರುಗಳಿಗೆ ಯಾವ ಕಾನೂನು ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಜೈವಿಕ ಇಂಧನ ತೋಟ ನಿರ್ಮಾಣ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೪೬ (೬೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜೈವಿಕ ಇಂಧನದ ಕೊರತೆ ಹೆಚ್ಚಾಗಿರುವುದನ್ನು ಸರ್ಕಾರವು ಗಮನಿಸಿದೆಯೇ;

(ಆ) ಹಾಗಿದ್ದಲ್ಲಿ, ಸುವರ್ಣಭೂಮಿ ಯೋಜನೆ ಅಡಿಯಲ್ಲಿ ಪ್ರತಿಯೊಂದು ತಾಲ್ಲೂಕಿನಲ್ಲಿ "ಜೈವಿಕ ಇಂಧನ ತೋಟ"ವನ್ನು ಬೆಳೆಸಲಾಗುವುದೆ;

(ಇ) ಪ್ರತಿಯೊಂದು ಶಾಲಾ–ಕಾಲೇಜು ಆವರಣದಲ್ಲಿ ಜೈವಿಕ ಇಂಧನದ ಮರಗಳನ್ನು ಬೆಳೆಸಲು ಪ್ರೋತ್ಸಾಹಿಸಲಾಗುವುದೆ?

## ಬಾಲ ಸಂಜೀವಿನಿ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೪೭ (೭೬೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಬಾಲ ಸಂಜೀವಿನಿ ಯೋಜನೆ ಜಾರಿಯಲ್ಲಿರುವುದೇ;

(ಆ) ಜಾರಿಯಿದ್ದಲ್ಲಿ, ಇದರ ಲಾಭವನ್ನು ಸದ್ಯ ಎಷ್ಟು ಮಕ್ಕಳು ಪಡೆದಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸಂಜೀವಿನಿ ಯೋಜನೆಯನ್ವಯ ಯಾವ ಯಾವ ಚಿಕಿತ್ಸೆಗೆ ಅವಕಾಶ ಕಲ್ಪಿಸಲಾಗಿದೆ; ಇದಕ್ಕೆ ಇರುವ ಮಾನದಂಡಗಳೇನು;

(ಈ) ಸದ್ಯ ಸಂಜೀವಿನಿ ಯೋಜನೆಯಲ್ಲಿ ಚಿಕಿತ್ಸೆಗಾಗಿ ಕೊಪ್ಪಳ ಜಿಲ್ಲೆಯಲ್ಲಿ ಯಾವ ಆಸ್ಪತ್ರೆಯನ್ನು ಆಯ್ಕೆ ಮಾಡಿಕೊಳ್ಳಲಾಗಿದೆ;

(ಉ) ೨೦೧೧–೧೨ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೂ ಜಿಲ್ಲೆಯಲ್ಲಿ ಅನಾರೋಗ್ಯದಿಂದ ಮೃತಪಟ್ಟ ಮಕ್ಕಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಊ) ಇಲಾಖೆಯವರು ಈ ಸಾವಿನ ಪ್ರಕರಣಕ್ಕೆ ನೀಡುವ ಕಾರಣವೇನು; ಸಾವಿನ ಸಂಖ್ಯೆಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು;

(ಋ) ಈ ಯೋಜನೆಯನ್ನು ಪ್ರಚಾರ ಮಾಡಲು ಇಲಾಖೆಯವರು ಅನುಸರಿಸಿದ ಕ್ರಮಗಳೇನು?

## ಬೋಧಕೇತರ ಕಾರ್ಯಕ್ಕೆ ಶಿಕ್ಷಕರ ನಿಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೪೮ (೭೯೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಕ್ಷಕರನ್ನು ಬೋಧಕೇತರ ಕಾರ್ಯಕ್ಕೆ ನಿಯೋಜಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ವಿವರಗಳನ್ನು ಜಿಲ್ಲಾವಾರು ನೀಡುವುದು;

(ಇ) ಜಿಲ್ಲಾವಾರು ಖಾಲಿಯಿರುವ ಶಿಕ್ಷಕರ ಹುದ್ದೆಗಳ ವಿವರಗಳನ್ನು ನೀಡುವುದು;

(ಈ) ಶಿಕ್ಷಕರನ್ನು ಬೋಧಕೇತರ ಕಾರ್ಯಗಳಿಗೆ ಬೇರೆ ಇಲಾಖೆಗಳಿಗೆ ನಿಯೋಜಿಸಿಕೊಂಡಿದ್ದಲ್ಲಿ ಇವರನ್ನು ಮರಳಿ ತಮ್ಮ ಕಾರ್ಯಸ್ಥಾನಗಳಿಗೆ ಹಿಂಪಡೆಯುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಶುದ್ಧ ಕುಡಿಯುವ ನೀರಿನ ಘಟಕ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :--**

೫೪೯ (೭೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಇಲಾಖೆಯಿಂದ ನಿರ್ಮಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು;

(ಆ) ಪ್ರತಿ ಘಟಕದ ಸಾಮರ್ಥ್ಯ ಹಾಗೂ ಪ್ರತಿ ಘಟಕಕ್ಕೆ ವ್ಯಯಿಸಲಾದ ಅನುದಾನವೆಷ್ಟು;

(ಇ) ಇವುಗಳಲ್ಲಿ ಉದ್ಘಾಟನೆಗೊಂಡು ಲೋಕಾರ್ಪಣೆಯಾದಂತಹ ಘಟಕಗಳ ಸಂಖ್ಯೆ ಹಾಗೂ ವಿವರಗಳನ್ನು ನೀಡುವುದು;

(ಈ) ಇನ್ನೂ ಪ್ರಾರಂಭವಾಗದೆ ಇರುವ ಘಟಕಗಳ ವಿವರಗಳನ್ನು ಹಾಗೂ ಅದಕ್ಕೆ ಸಕಾರಣಗಳನ್ನು ನೀಡುವುದು;

(ಉ) ಸದರಿ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಲೋಕಾರ್ಪಣೆಗೊಂಡು ದುರಸ್ತಿಯಲ್ಲಿರುವ ಘಟಕಗಳು ಇವೆಯೇ? (ಇದ್ದಲ್ಲಿ ಅವುಗಳ ವಿವರಗಳನ್ನು ನೀಡುವುದು)

## ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೫೦ (೭೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯಿಂದ ಕೊಪ್ಪಳ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕುಡಿಯುವ ನೀರಿನ

ಯೋಜನೆಗಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ನೀರು ದೊರೆಯದೇ ವಿಫಲವಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕುಡಿಯುವ ನೀರಿನ ಯೋಜನೆಗಾಗಿ ಸರ್ಕಾರದಿಂದ ಮಂಜೂರು ಮಾಡಲಾದ ಅನುದಾನ ಎಷ್ಟು ;

(ಈ) ಇಲ್ಲಿಯವರೆಗೂ ಸದರಿ ಅನುದಾನದಲ್ಲಿ ಬಳಕೆಯಾದ ಅನುದಾನ, ಬಾಕಿ ಉಳಿದ ಅನುದಾನ ಎಷ್ಟು;

(ಉ) ಇನ್ನೂ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳು ಯಾವುವು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಊ) ಸದರಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಕಟ್ಟಡಗಳ ನಿರ್ಮಾಣ : ನೀಡಲಾದ ಅನುದಾನ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೫೧ (೭೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕಟ್ಟಡಗಳ ನಿರ್ಮಾಣಕ್ಕೆಂದು ನೀಡಲಾದ ಅನುದಾನವೆಷ್ಟು;

(ಆ) ಸದರಿ ಅನುದಾನದಲ್ಲಿ ನಿರ್ಮಿಸಿದ ಕಟ್ಟಡಗಳ ಸಂಖ್ಯೆ ಹಾಗೂ ವಿವರಗಳನ್ನು ನೀಡುವುದು;

(ಇ) ಸದರಿ ಕಟ್ಟಡಗಳ ಗುಣಮಟ್ಟವನ್ನು ವೀಕ್ಷಿಸಲು ಯಾವ ಸಿಬ್ಬಂದಿಗಳನ್ನು ನಿಯೋಜಿಸಿದೆ;

(ಈ) ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿರುವ ಬ್ಲಾಕ್ ಅಭಿಯಂತರರು ಹಾಗೂ ಜಿಲ್ಲಾ ಅಭಿಯಂತರರ ಹುದ್ದೆಗಳು ಭರ್ತಿ ಇವೆಯೇ;

(ಉ) ಇಲ್ಲವಾದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಶಿಕ್ಷಣ ಹಕ್ಕು ಕಾಯ್ದೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೫೨ (೭೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿಕ್ಷಣ ಹಕ್ಕು ಕಾಯ್ದೆ (R.T.E.) ಜಾರಿಗೆ ಬಂದ ನಂತರ ರಾಜ್ಯದಲ್ಲಿ ಎಷ್ಟು ಜನ ಬಡ ವಿದ್ಯಾರ್ಥಿಗಳು ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆದಿದ್ದಾರೆ; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಯಾವ ಶೈಕ್ಷಣಿಕ ಸಂಸ್ಥೆಗಳು/ಶಾಲೆಗಳು ಸದರಿ ಕಾನೂನಿನ ವ್ಯಾಪ್ತಿಯಿಂದ ವಿನಾಯಿತಿ ಪಡೆದಿವೆ ; (ಅಂತಹ ಶಾಲೆಗಳ ವಿವರ ನೀಡುವುದು)

(ಇ) ೨೦೧೪-೧೫ನೇ ಸಾಲಿನಲ್ಲಿ ಶೇಕಡಾ ೨೫ ಮೀಸಲಾತಿ ನೀಡದೇ ಇರುವ ಅನುದಾನ ರಹಿತ ಶಾಲೆಗಳ ಸಂಖ್ಯೆ ಎಷ್ಟು; ಈ ರೀತಿ ಕಾನೂನು ಉಲ್ಲಂಘನೆ ಮಾಡಿರುವ ಶಾಲೆಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು;

(ಈ) ಶೈಕ್ಷಣಿಕ ವರ್ಷ ಪ್ರಾರಂಭವಾಗುವ ಮೊದಲೇ ಕೆಲವು ಶಾಲೆಗಳು ಪ್ರವೇಶ ಪ್ರಕ್ರಿಯೆ ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮವೇನು?

## ಶಾಶ್ವತ ಕುಡಿಯುವ ನೀರಿನ ಯೋಜನೆ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೫೩ (೭೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಕಡೂರು ಹಾಗೂ ಹಾಸನ ಜಿಲ್ಲೆಯ ಬೇಲೂರು ಮತ್ತು ಅರಸೀಕೆರೆ ತಾಲ್ಲೂಕುಗಳ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಭಾಗದ ಗ್ರಾಮಾಂತರ ಜನತೆಯ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸರ್ಕಾರ ತೆಗೆದುಕೊಂಡಿರುವ ತುರ್ತು ಕ್ರಮಗಳೇನು;

(ಇ) ಮೇಲ್ಕಾಣಿಸಿದ ತಾಲ್ಲೂಕುಗಳ ಗ್ರಾಮಾಂತರ ಜನತೆಯ ಈ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಲು ಲಭ್ಯವಿರುವ ನದಿ ಮೂಲಗಳಿಂದ ಕುಡಿಯುವ ನೀರು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಇಲಾಖೆಯು ಕೈಗೊಳ್ಳಲಿರುವ ಕ್ರಮಗಳೇನು? (ವಿವರಗಳನ್ನು ಒದಗಿಸುವುದು)

## ಶ್ರೀರಂಗಪಟ್ಟಣದ ಕೋಟೆ ಅಭಿವೃದ್ಧಿ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನ ಸಭೆಯಿಂದ ಚುನಾಯಿತರಾದವರು) :--**

೫೫೪ (೭೦೨) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶ್ರೀರಂಗಪಟ್ಟಣದ ಐತಿಹಾಸಿಕ ಕೋಟೆಯ ಯಥಾಸ್ಥಿತಿಯನ್ನು ಕಾಯ್ದುಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಸದರಿ ಕೋಟೆಯು ಅನೇಕ ಸುತ್ತುಗಳಿಂದ ನಿರ್ಮಿಸಲ್ಪಟ್ಟಿದ್ದು, ಒಂದು ಸುತ್ತಿನಿಂದ ಇನ್ನೊಂದು ಸುತ್ತಿನ ಮಧ್ಯದಲ್ಲಿರುವ ಖಾಲಿ ಜಾಗವನ್ನು ಪ್ರವಾಸೋದ್ಯಮ ದೃಷ್ಟಿಯಿಂದ ವ್ಯವಸ್ಥಿತವಾಗಿ ಬಳಸಿಕೊಳ್ಳಲು ಕಾನೂನು ರೀತಿ ಸರ್ಕಾರಕ್ಕೆ ಇರುವ ತೊಡಕುಗಳೇನು;

(ಇ) ಒಂದು ಸುತ್ತಿನಿಂದ ಇನ್ನೊಂದು ಸುತ್ತಿನ ಮಧ್ಯದಲ್ಲಿ ಲಭ್ಯವಿರುವ ಹಾಲಿ ಜಾಗದಲ್ಲಿ ಬ್ಯಾಟರಿ ಚಾಲಿತ ವಾಹನಗಳನ್ನು ಬಳಸಿ ಪ್ರವಾಸಿಗರಿಗೆ ವಾಹನದಲ್ಲಿ ಕುಳಿತು ಕೋಟೆಯ ಎಲ್ಲಾ ಭಾಗಗಳನ್ನು ಸಂದರ್ಶಿಸಲು ಅವಕಾಶ ಕಲ್ಪಿಸಲು ಸಾಧ್ಯವಿಲ್ಲವೆ;

(ಈ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಳ್ಳಬಯಸುವ ಕ್ರಮಗಳೇನು?

## ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೫೫ (೬೯೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೨೦೧೪ನೇ ಸಾಲಿಗೆ ಬೆಳಗಾಂ ಜಿಲ್ಲೆಯಲ್ಲಿ ಬಸವಶ್ರೀ ವಸತಿ ಯೋಜನೆ, ಇಂದಿರಾ ಅವಾಜ್ ಯೋಜನೆ ಮತ್ತು

ವಾಜಪೇಯಿ ನಗರ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ;

(ಆ) ಈ ಪೈಕಿ ಇಲ್ಲಿಯವರೆಗೆ ಬೆಳಗಾಂ ಜಿಲ್ಲೆಯಲ್ಲಿ ಮೇಲ್ಕಂಡ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಿದೆ; ಇದಕ್ಕಾಗಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; ಹಾಗೂ ಖರ್ಚು ಮಾಡಿರುವ ಹಣವೆಷ್ಟು;

(ಇ) ಪ್ರಸಕ್ತ ಸಾಲಿನಲ್ಲಿ ಗುರಿಯನ್ನು ಸಾಧಿಸಲಾಗಿದೆಯೇ; ಒಂದು ವೇಳೆ ಗುರಿ ಸಾಧನೆ ವಿಳಂಬವಾಗಿದ್ದಲ್ಲಿ ಕಾರಣವೇನು?

## ಮಲ್ಲಮ್ಮನ ಬೆಳವಡಿ ಅಭಿವೃದ್ಧಿಗೆ ಸಮಗ್ರ ಯೋಜನೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೫೫೬ (೭೦೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳವಡಿ ಮಲ್ಲಮ್ಮನ ಹುಟ್ಟೂರಾದ ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ಬೆಳವಡಿಯನ್ನು ಸಮಗ್ರ ಅಭಿವೃದ್ಧಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ;

(ಆ) ಹೊರ ರಾಜ್ಯಗಳಲ್ಲಿ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಟ ಮಾಡಿ ಮಡಿದ ಹುತಾತ್ಮರ ಸ್ಥಳಗಳಲ್ಲಿ ಕೈಗೊಂಡಂತೆ ಇಲ್ಲಿಯೂ ಸಹ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಯಾವ ಪ್ರಕಾರವಾಗಿ ಬೇರೆ-ಬೇರೆ ಇಲಾಖೆಗಳ ಸಹಾಯದಿಂದ ಅಭಿವೃದ್ಧಿ ಮತ್ತು ಕ್ರಿಯಾಯೋಜನೆ ಮಾಡಲಾಗಿದೆ; (ವಿವರಗಳನ್ನು ನೀಡುವುದು)

(ಈ) ಬೆಳವಡಿ ಮಲಮ್ಮನ ಕುರಿತು ಗ್ರಂಥ ಹೊರತರುವುದು, ಸಂಶೋಧನೆ ನಡೆಸುವುದು ಹಾಗೂ ವಿದ್ಯಾರ್ಥಿಗಳಿಗೆ ಫೆಲೋಶಿಪ್ ನೀಡುವುದು, ಮಲ್ಲಮ್ಮನ ವಿಷಯವಾಗಿ ಪಿ.ಎಚ್.ಡಿ. ಮಾಡುವವರಿಗೆ ಸರ್ಕಾರದಿಂದ ಸಹಾಯ ಮಾಡಲಾಗುವುದೇ; ಹಾಗೂ ಯಾವ ಪ್ರಕಾರವಾಗಿ ಸಹಾಯ ಮಾಡಲಾಗುವುದು;

(ಉ) ಬೆಳವಡಿ ಗ್ರಾಮದಲ್ಲಿ ಅಂತರರಾಷ್ಟ್ರೀಯ ಮಟ್ಟದ ಕುಸ್ತಿ ಶಾಲೆಯನ್ನು ಪ್ರಾರಂಭಿಸಲಾಗುವುದೇ; ಹಾಗೂ ಬೆಳವಡಿಯಲ್ಲಿ ರಾಕ್ ಗಾರ್ಡನ್ ಮತ್ತು ಪ್ರಾಣಿ ಸಂಗ್ರಹಾಲಯ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ;

(ಊ) ಕೇಂದ್ರ ಸರ್ಕಾರದಿಂದ ಸಹಾಯ ಪಡೆಯಲು ಅಭಿವೃದ್ಧಿ ಕ್ರಮ ಕೈಗೊಳ್ಳಲು ಕ್ರಿಯಾ ಯೋಜನೆ ರೂಪಿಸಲು ಜಿಲ್ಲಾಧಿಕಾರಿಗಳು, ಬೆಳಗಾವಿ ಇವರಿಗೆ ಆದೇಶ ಮಾಡಲಾಗುವುದೇ?

## ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಕಳಪೆ ಮಟ್ಟದ ಸೈಕಲ್‌ಗಳ ವಿತರಣೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೫೫೭ (೭೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ವಿತರಿಸಿದ ಸೈಕಲ್‌ಗಳು ಕಳಪೆ ಮಟ್ಟದ್ದಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸೈಕಲ್‌ಗಳು ಒಂದೇ ವರ್ಷದಲ್ಲಿ ಮುರಿದು ಉಪಯೋಗಿಸಲು ಬಾರದ್ದಕ್ಕಾಗಿ ಬೆಳಗಾವಿ ಜಿಲ್ಲೆಯಲ್ಲಿ ವಿದ್ಯಾರ್ಥಿಗಳು ಕೆ.ಜಿ.ಗೆ

ಇಪ್ಪತ್ತರಂತೆ ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕಳೆದ ವರ್ಷ ಬೆಳಗಾವಿ ಜಿಲ್ಲೆಗೆ ವಿತರಿಸಿದ ಎಲ್ಲ ಸೈಕಲ್‌ಗಳು ಗುಣಮಟ್ಟವಿಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬೆಳಗಾವಿ ಜಿಲ್ಲೆಯಲ್ಲಿ ಯಾವ-ಯಾವ ಶಾಲೆಗಳಿಗೆ ಎಷ್ಟು ಸೈಕಲ್‌ಗಳನ್ನು ಪೂರೈಸಲಾಗಿದೆ; (ತಾಲ್ಲೂಕುವಾರು ವಿವರ ಒದಗಿಸುವುದು)

(ಉ) ಜಿಲ್ಲೆಯ ಗೋಕಾಕ ತಾಲ್ಲೂಕಿಗೆ ಪೂರೈಸಿದ ಎಲ್ಲ ಸೈಕಲ್‌ಗಳು ಕಳಪೆ ಮಟ್ಟದ್ದಾಗಿದ್ದು, ಗುಜರಿ ಅಂಗಡಿಗೆ ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಕಳಪೆ ಪೂರೈಕೆ ಮಾಡಿದ ಸೈಕಲ್‌ಗಳನ್ನು ಹಿಂದೆ ಪಡೆದ ಹೊಸ ಉತ್ತಮ ಸೈಕಲ್‌ಗಳನ್ನು ಪೂರೈಸಲು ಕ್ರಮ ಕೈಗೊಳ್ಳಲಾಗುವುದೇ?

## ಶಿವಯೋಗಿ ಮಂದಿರದಲ್ಲಿ ಕಾಮಗಾರಿ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೫೫೮ (೭೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೧ರಲ್ಲಿ ಸದನದಲ್ಲಿ ಅಂದಿನ ಮುಖ್ಯಮಂತ್ರಿಗಳು ಶಿವಯೋಗಿ ಮಂದಿರದ ಅಭಿವೃದ್ಧಿಗಾಗಿ ಹದಿನೈದು ಕೋಟಿ ರೂ. ಕೆಲಸ ತೆಗೆದುಕೊಳ್ಳುವುದಾಗಿ ಆಶ್ವಾಸನೆ ನೀಡಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ಆಶ್ವಾಸನೆ ಪ್ರಕಾರ ಹಣ ಬಿಡುಗಡೆ ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ;

(ಆ) ಇಲ್ಲಿ ಅಭಿವೃದ್ಧಿ ಪಡಿಸುವ ಸಲುವಾಗಿ ೯೫ ಲಕ್ಷ ರೂ.ಗಳ ಅನುದಾನ ಬಿಡುಗಡೆ ಮಾಡುವುದಾಗಿ ಸದನದಲ್ಲಿ ಆಶ್ವಾಸನೆ ನೀಡಿದ ಹಿನ್ನೆಲೆಯಲ್ಲಿ ಕಾರ್ಯಕಾರಿ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ ಬಾಗಲಕೋಟೆ ಇವರು ಈ ಕೆಲಸಗಳ ಅಂದಾಜು ವೆಚ್ಚ ಪತ್ರಿಕೆ ತಯಾರಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಬಾಗಲಕೋಟೆ ಇವರಿಗೆ ಆಡಳಿತಾತ್ಮಕ ಮಂಜೂರಾತಿ ಕೊಡಲು ಪ್ರಸ್ತಾವನೆಯನ್ನು ಕಳುಹಿಸಿದ್ದು, ಆ ಪ್ರಸ್ತಾವನೆ ಪ್ರಕಾರ ಎಷ್ಟು ಮೊತ್ತಕ್ಕೆ ಹಾಗೂ ಎಂದು ಮಂಜೂರಾತಿ ಕೊಡಲಾಗಿದೆ;

(ಇ) ಈ ಪ್ರಸ್ತಾವನೆಯಲ್ಲಿ ಯಾವ-ಯಾವ ಕಾಮಗಾರಿಗಳು ಸೇರಿರುತ್ತವೆ; ಪ್ರತಿಯೊಂದು ಕೆಲಸಗಳ ಮೊತ್ತ ಎಷ್ಟು? (ವಿವರ ಒದಗಿಸುವುದು)

## ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಆಂಗ್ಲ ಭಾಷೆಯ ಹುದ್ದೆಗಳ ಮಂಜೂರಾತಿ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೫೫೯ (೭೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಪ್ರೌಢ ಶಾಲೆಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಒಟ್ಟು ಆಂಗ್ಲ ಭಾಷೆಯ ಮಂಜೂರಾದ ಹುದ್ದೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇನ್ನೂ ಅನೇಕ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಆಂಗ್ಲ ಭಾಷೆಯ ಹುದ್ದೆಗಳು ಮಂಜೂರಾಗದೇ ಇರುವುದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಕೂಡಲೇ ಈ ಹುದ್ದೆಗಳಿಗೆ ಮಂಜೂರಾತಿ ನೀಡಲು ಕ್ರಮ ಕೈಗೊಳ್ಳಲಾಗುವುದೇ?

## ಗ್ರಾಮ ಪಂಚಾಯತುಗಳ ಮರು ವಿಂಗಡಣೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೬೦ (೭೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತುಗಳ ಒಳಗಿನ ಗ್ರಾಮಗಳನ್ನು ವಿಭಜನೆ ಮಾಡುವ, ಸೇರಿಸುವ ಮತ್ತು ಕೇಂದ್ರಗಳನ್ನು ಮರುಪರಿಶೀಲಿಸುವ ಚಿಂತನೆ ಸರ್ಕಾರದ ಮುಂದಿದೆಯೇ; ಈ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆಯೇ;

(ಆ) ಈ ಪ್ರಕ್ರಿಯೆಗಳನ್ನು ಗ್ರಾಮ ಪಂಚಾಯತುಗಳ ಬೇಡಿಕೆ ಮೇರೆಗೆ ಪ್ರಾರಂಭಿಸಲಾಗಿದೆಯೇ ಅಥವಾ ಗ್ರಾಮ ಪಂಚಾಯತುಗಳ ಅಭಿವೃದ್ಧಿಯ ದೃಷ್ಟಿಯಲ್ಲಿ ಚಾಲನೆ ನೀಡಲಾಗಿದೆಯೇ;

(ಇ) ಈ ಮೇಲಿನ ಪ್ರಕ್ರಿಯೆಯ ಬಗ್ಗೆ ಅರ್ಜಿ ಕರೆಯಲಾಗಿದೆಯೇ; ಅಥವಾ ರಾಜಕೀಯ ನಿರ್ಧಾರದ ಮೇರೆಗೆ ತೀರ್ಮಾನ ಕೈಗೊಳ್ಳಲಾಗಿದೆಯೇ?

## ಗ್ರಾಮ ಪಂಚಾಯತ್ ಸಿಬ್ಬಂದಿಗೆ ವೇತನ ಪಾವತಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೫೬೧ (೭೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿನ ಗ್ರಾಮ ಪಂಚಾಯತ್‌ಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ಲೆಕ್ಕ ಸಹಾಯಕ, ಪಂಚತಂತ್ರ ದಾಖಲಿಸುವ ಮುಂತಾದ ಸಿಬ್ಬಂದಿಗಳ ವೇತನವು ವಾರ್ಷಿಕ ೮ ಲಕ್ಷಕ್ಕೂ ಹೆಚ್ಚು ಪಾವತಿಸುವ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು; ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಸರ್ಕಾರವು ಗ್ರಾಮ ಪಂಚಾಯತ್‌ಗಳಿಗೆ ವಾರ್ಷಿಕ ನೀಡುತ್ತಿರುವ ೮ ಲಕ್ಷ ಶಾಸನ ಬದ್ಧ ಅನುದಾನವನ್ನು ವೆಚ್ಚ ಮಾಡಲು ವಾರ್ಷಿಕ ೮ ಲಕ್ಷ ವೇತನ ಪಡೆಯುವ ಗ್ರಾಮ ಪಂಚಾಯತ್‌ಗಳ ಸಿಬ್ಬಂದಿಗಳ ಅವಶ್ಯಕತೆವಿದೆಯೇ; ಇದ್ದಲ್ಲಿ ಕಾರಣ ತಿಳಿಸುವುದು; ಇಲ್ಲವಾದಲ್ಲಿ ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ;

(ಇ) ರಾಜ್ಯದ ಗ್ರಾಮ ಪಂಚಾಯತ್‌ಗಳ ಗ್ರಾಮ ಸಭೆಗಳಲ್ಲಿ ಬಂದ ಅರ್ಜಿಗಳ ಮೇಲೆ ಕ್ರಮದ ಮೌಲ್ಯಮಾಪನ ಮಾಡಲಾಗುವುದೇ; ಮಾಡಲಾಗಿದ್ದಲ್ಲಿ, ಎಷ್ಟು ಪ್ರತಿಶತ ಗ್ರಾಮ ಸಭೆಯ ಸಮಸ್ಯೆಗಳು ಪರಿಹಾರವಾಗಿವೆ; ಇಲ್ಲವಾದಲ್ಲಿ ಕಾರಣಗಳೇನು;

(ಈ) ವಾರ್ಡ್‌ಸಭೆ ಮತ್ತು ಗ್ರಾಮಸಭೆಗಳಿಗೆ ಇರುವ ವ್ಯತ್ಯಾಸವೇನು; ಮತ್ತು ಅವುಗಳ ಅವಶ್ಯಕತೆ ಏನು; ಮತ್ತು ಅವುಗಳ ಸ್ಪಂದನೆಗೆ ಸರ್ಕಾರದ ಕಾರ್ಯಕ್ರಮಗಳೇನು?

## ವಸತಿ ಇಲಾಖೆಯ ಅಧೀನದಲ್ಲಿನ ಕಛೇರಿಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೬೨ (೭೧೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ವಸತಿ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಛೇರಿಗಳು ಎಷ್ಟು ; ಮತ್ತು ಯಾವುವು ;

(ಆ) ಈ ಎಲ್ಲಾ ಕಛೇರಿಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಮತ್ತು ಕೊರತೆ ಇರುವ ಹುದ್ದೆಗಳೆಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ವಸತಿ ಇಲಾಖೆಯಿಂದ ಪರಿಣಾಮಕಾರಿಯಾದ ಸುಧಾರಣೆಯನ್ನು ತರಲು ತಾಲ್ಲೂಕು ಪಂಚಾಯತ್ ಕಛೇರಿಯಲ್ಲಾದರೂ ಇಲಾಖಾ ಶಾಶ್ವತ ಸಿಬ್ಬಂದಿಯನ್ನು ನೇಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ಅಕ್ರಮ ಮದ್ಯ ಮಾರಾಟ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೬೩ (೭೧೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ, ಗ್ರಾಮಗಳ ಕಿರಾಣಿ ಮತ್ತು ಗೂಡಗಂಡಿಗಳಲ್ಲಿ ಅಕ್ರಮ ಮದ್ಯ ದೊರಯುತ್ತಿರುವಾಗ, ಸರ್ಕಾರವು ಹೆಚ್ಚುವರಿ ಮದ್ಯದಂಗಡಿಗಳನ್ನು ತೆರೆಯದಿರಲು ಕಾರಣವೇನು ;

3 B/B

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಅಬಕಾರಿ ಇಲಾಖೆಯ ಕಛೇರಿಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಕೊರತೆ ಇರುವ ಹುದ್ದೆಗಳೆಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ತಾಲ್ಲೂಕುವಾರು, ಕಛೇರಿವಾರು, ಹುದ್ದೆವಾರು ವಿವರ ನೀಡುವುದು) ;

(ಇ) ರಾಜ್ಯದ ಕಿರಾಣಿ ಮತ್ತು ಗೂಡಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟವನ್ನು ನಿಲ್ಲಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ತೆಗೆದುಕೊಳ್ಳುವ ಕ್ರಮಗಳೇನು ?

## ವಸತಿ ಯೋಜನೆಯಡಿ ಸಾಲಮನ್ನಾ ಪಡೆದ ಫಲಾನುಭವಿಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೬೪ (೭೧೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಸತಿ ಯೋಜನೆಯ ಸಾಲಮನ್ನಾದಡಿಯಲ್ಲಿ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಯೋಜನೆವಾರು ವಿವರ ನೀಡುವುದು) ;

(ಆ) ವಸತಿ ಯೋಜನೆಯ ಸಾಲಮನ್ನಾದ ಮಾಹಿತಿಯನ್ನು ಫಲಾನುಭವಿಗಳಿಗೆ ಮುಟ್ಟಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಫಲಾನುಭವಿಯು ವಸತಿ ಯೋಜನೆಯಡಿ ಪಡೆದ ಸಾಲದ ದಾಖಲೆಗಳು ಪಹಣಿ ಪತ್ರದಲ್ಲಿ ನಮೂದಾಗಿರುವುದನ್ನು ತೆಗೆದು ಹಾಕಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬರಗಾಲ ಪರಿಸ್ಥಿತಿಯಲ್ಲಿ ಕುಡಿಯುವ ನೀರು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೬೫ (೭೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್‌ಗಳಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಹೆಚ್ಚು ಕ್ಷಮತೆ ಇಲ್ಲದೆ ಇರುವುದರಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಏನು ಕ್ರಮ ಜರುಗಿಸಲಿದೆ ;

(ಇ) ಇಲ್ಲಿ ಕಾರ್ಯನಿರ್ವಹಿಸುವ ಕಂಪ್ಯೂಟರ್ ಆಪರೇಟರ್‌ಗಳನ್ನು ಖಾಯಂಗೊಳಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಈ) ಗ್ರಾಮ ಪಂಚಾಯತ್‌ಗಳ ಮರು ವಿಂಗಡಣೆ ಬಗ್ಗೆ ಮಾಜಿ ಶಾಸಕರಾದ ಶ್ರೀ ನಂಜಯ್ಯನಮಠ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಇಂತಹ ಗ್ರಾಮ ಪಂಚಾಯತ್‌ಗಳ ಮರು ವಿಂಗಡಣೆ ಮಾಡುವ ವಿಚಾರದಲ್ಲಿ ಸರ್ಕಾರದ ಮಾನದಂಡಗಳೇನು ;

(ಊ) ಈ ಸಮಿತಿಯು ಎಷ್ಟು ದಿನಗಳಲ್ಲಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ ?

## ಕುಡಿಯುವ ನೀರಿನ ಸಮಸ್ಯೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೬೬ (೭೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೀಕರ ಬರಗಾಲ ಪರಿಸ್ಥಿತಿ ಉದ್ಭವವಾಗಿದ್ದು ಬೆಳಗಾವಿ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆ ಉದ್ಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅದಕ್ಕೆ ಸರ್ಕಾರವು ಕೈಗೊಂಡ ಕ್ರಮಗಳೇನು (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಈಗಾಗಲೇ ಟ್ಯಾಂಕರ್ ಮೂಲಕ ನೀರು ಪೂರೈಸುವ ವ್ಯವಸ್ಥೆ ಕಲ್ಪಿಸಲಾಗಿದೆಯೇ (ಆ ಬಗ್ಗೆ ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು) ;

(ಈ) ಒಟ್ಟು ಈಗಾಗಲೇ ವೆಚ್ಚ ಮಾಡಿದ ಹಣ ಎಷ್ಟು ? (ತಾಲ್ಲೂಕುವಾರು ಮತ್ತು ಗ್ರಾಮವಾರು ವಿವರ ನೀಡುವುದು)

## ವೀರ ರಾಣಿ ಕಿತ್ತೂರು ಚೆನ್ನಮ್ಮನವರ ಜನ್ಮ ಸ್ಥಳದ ಅಭಿವೃದ್ಧಿ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೬೭ (೭೧೬) ಮಾನ್ಯ ಮಹಿಳಾ ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವೀರ ರಾಣಿ ಕಿತ್ತೂರು ಚೆನ್ನಮ್ಮರವರ ಜನ್ಮ ಸ್ಥಳ ಬೆಳಗಾವಿ ಜಿಲ್ಲೆಯ ಕಾಕತಿ ಗ್ರಾಮವನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಅಲ್ಲಿ ಕೈಗೊಳ್ಳಲು ರೂಪಿಸಿದ ಯೋಜನೆಗಳು ಯಾವುವು ;

(ಇ) ಅದಕ್ಕೆ ತಗಲುವ ವೆಚ್ಚ ಎಷ್ಟು ; ಅಭಿವೃದ್ಧಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವಾಗ ಪೂರ್ಣಗೊಳಿಸಲಾಗುವುದು (ವಿವರ ನೀಡುವುದು) ?

## ಗ್ರಾಮ ಪಂಚಾಯತ್ ಸದಸ್ಯರ ಗೌರವಧನ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೬೮ (೭೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯತಿ ಸದಸ್ಯರಿಗೆ ಗೌರವಧನ ನೀಡುವಲ್ಲಿ ವಿಳಂಬವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗ್ರಾಮ ಪಂಚಾಯತ್ ಸದಸ್ಯರಿಗೆ ನೀಡುತ್ತಿರುವ ಗೌರವಧನವೆಷ್ಟು ;

(ಇ) ಯಾವ ತಿಂಗಳವರೆಗೆ ಗೌರವಧನ ಪಾವತಿ ಮಾಡಲಾಗಿದೆಯೇ ;

(ಈ) ಇಂತಹ ವಿಳಂಬದಿಂದ ಗೌರವಾನಿತ್ವ ಸದಸ್ಯರಿಗೆ ಅಗೌರವ ತೋರಿಸಿದಂತಾಗುವುದಿಲ್ಲವೇ ;

(ಈ) ಗೌರವಧನವನ್ನು ಕಾಲಮಿತಿಯಲ್ಲಿ ಸಂದಾಯ ಮಾಡುವ ವಿಚಾರ ಸರ್ಕಾರದ ಗಮನದಲ್ಲಿ ಇದೆಯೇ ?

## ವಿವಿಧ ರೀತಿಯ ಸೌಲಭ್ಯಗಳು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :- :-**

೫೬೭ (೭೧೯) ಮಾನ್ಯ ಮಹಿಳಾ ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭವೃದ್ಧಿ ಇಲಾಖೆಯಿಂದ ನೀಡುತ್ತಿರುವ ವಿವಿಧ ಸೌಲಭ್ಯ ಹಾಗೂ ಕಾರ್ಯಕ್ರಮಗಳು ಯಾವುವು ;

(ಆ) ಇವುಗಳನ್ನು ಅನುಷ್ಠಾನಗೊಳಿಸಲು ತಾಲ್ಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ರಚಿಸಲಾಗುವುದು ;

(ಇ) ರಾಜ್ಯದ ಅಂಗನವಾಡಿಗಳಲ್ಲಿ ಬಾಲ ವಿಕಾಸ ಸಮಿತಿಗಳನ್ನು ರಚಿಸಲಾಗಿದೆಯೇ; ಈ ಸಮಿತಿ ಎಷ್ಟು ಸದಸ್ಯರನ್ನು ಒಳಗೊಂಡಿರುತ್ತದೆ; ಮತ್ತು ಸದಸ್ಯರಾಗಲು ಅರ್ಹತೆ ಏನು; ಬಾಲ ವಿಕಾಸ ಸಮಿತಿಗಳಿಗೆ ಸರ್ಕಾರದಿಂದ ಯಾವ ಯಾವ ಕೆಲಸ ಕಾರ್ಯಗಳಿಗೆ ಅನುದಾನ ಬರುತ್ತದೆ ಸದರಿ ಅನುದಾನವನ್ನು ಖರ್ಚು ಮಾಡುವ ಅಧಿಕಾರವನ್ನು ಯಾರಿಗೆ ನೀಡಲಾಗಿದೆ (ವಿವರ ನೀಡುವುದು) ?

## ಶಿಕ್ಷಣ ಆಯುಕ್ತಾಲಯ ವ್ಯಾಪ್ತಿಯ ಬೋಧಕೇತರ ನೌಕರರ ಬಡ್ತಿ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೫೭೦ (೭೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಆಯುಕ್ತಾಲಯದ ಅಧೀನದಲ್ಲಿ ಬರುವ ೭ ಜಿಲ್ಲೆಗಳಲ್ಲಿ ಕೆಲಸ ಮಾಡುತ್ತಿರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಅವರು ಯಾವ ಯಾವ ಹುದ್ದೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ (ಸಂಪೂರ್ಣ ಮಾಹಿತಿ ನೀಡುವುದು) ;

(ಆ) ಸುಮಾರು ೬೦೦ ರಿಂದ ೮೦೦ ಜನರು ಬೋಧಕೇತರ ಸಿಬ್ಬಂದಿಗಳ ಕಳೆದ ನಾಲ್ಕು ವರ್ಷಗಳಿಂದ ಬಡ್ತಿಯಿಂದ ವಂಚಿತರಾಗಿರುವುದು ನಿಜವೇ ; ನಿಜವಿದ್ದಲ್ಲಿ ಕಾರಣಗಳೇನು ;

(ಇ) ಸದರಿ ವಿಷಯುದಲ್ಲಿ ಹೈಕೋರ್ಟ್, ಕೆ.ಎ.ಟಿ ಮತ್ತು ಲೋಕಾಯುಕ್ತರು ೧೫ ದಿನಗಳಲ್ಲಿ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿದ್ದಾಗ್ಯೂ ಇನ್ನೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಈ) ಸದರಿ ವಿಷಯದಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಂಡು ಇವರಿಗೆ ನ್ಯಾಯ ಒದಗಿಸುವುದೇ ?

## ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕ

**ಶ್ರೀ ಬಸವರಾಜು ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೫೭೧ (೭೩೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪದವಿ ಕಾಲೇಜುಗಳಿಂದ ಪದವಿ ಪೂರ್ವ ಕಾಲೇಜುಗಳನ್ನು ಯಾವ ದಿನಾಂಕದಂದು ವಿಭಜನೆಗೊಳಿಸಲಾಯಿತು; ಪದವಿ

ಪೂರ್ವ ಮಹಾವಿದ್ಯಾಲಯದಲ್ಲಿ ಅಂದಿನಿಂದ ಕೆಲಸ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು; (ಧಾರವಾಡ, ಹಾವೇರಿ, ಗದಗ, ಕಾರವಾರ ಈ ಜಿಲ್ಲೆಯ ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ೧೦–೧೨ ವರ್ಷಗಳಿಂದ ಮೇಲ್ಕಾಣಿಸಿದ ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳಲ್ಲಿ ಕೆಲಸ ಮಾಡುತ್ತಾ ಬಂದಿರುವ ಉಪನ್ಯಾಸಕರುಗಳನ್ನು ಅನುದಾನಕ್ಕೆ ಒಳಪಡಿಸದಿರಲು ಕಾರಣಗಳೇನು ;

(ಇ) ಆದ ಕಾರಣ, ಇಂತಹ ವಿಭಜಿತ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಾ ಬಂದಿರುವ ಶಿಕ್ಷಕರುಗಳಲ್ಲಿ ಮುಂದೆ ನಡೆಯಲಿರುವ ಹೊಸ ನೇಮಕಾತಿಗೆ ಮುಂಚೆ ಇವರನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ;

(ಈ) ಅಲ್ಲದೆ ೨೦೦೨ ರಿಂದ ಧಾರವಾಡ, ಕಾರವಾರ, ಹಾವೇರಿ ಗದಗ ಜಿಲ್ಲೆಯ ಎಷ್ಟು ಕಾಲೇಜುಗಳಲ್ಲಿ ಇನ್ನೂ ಹುದ್ದೆಗಳು ಖಾಲಿ ಉಳಿದಿರುತ್ತವೆ; ಅವುಗಳನ್ನು ಭರ್ತಿಗೊಳಿಸಲು ಸರ್ಕಾರ ಏನು ಕ್ರಮಕೈಗೊಳ್ಳುವುದು ?

## ಲೋಟಸ್ ಶಿಕ್ಷಣ ಸಂಸ್ಥೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :– :–**

೫೭೨ (೭೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಟಸ್ ವಿದ್ಯಾ ಸಂಸ್ಥೆ, ಮುಂಡಗೋಡ, ಕಾರವಾರ ಜಿಲ್ಲೆ ಈ ಸಂಸ್ಥೆಗೆ ಆಡಳಿತಾಧಿಕಾರಿಯನ್ನು ನೇಮಿಸಿದ್ದು ನಿಜವೇ; ನೇಮಿಸಿದ್ದಲ್ಲಿ ಕಾರಣಗಳೇನು ;

(ಆ) ಯಾವ ದಿನಾಂಕದಂದು ಆಡಳಿತಾಧಿಕಾರಿಯನ್ನು ನೇಮಿಸಲಾಗಿದೆ; ಆಡಳಿತಾಧಿಕಾರಿಯನ್ನು ಮುಂದುವರೆಸಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಇ) ಆಡಳಿತ ಮಂಡಳಿಯಲ್ಲಿ ಒಟ್ಟು ಎಷ್ಟು ಸದಸ್ಯರಿರುವರು; ಅವರ ಹೆಸರು ಮತ್ತು ಹುದ್ದೆಗಳಾವುವು ;

(ಈ) ಇಲ್ಲಿಯವರೆಗೆ ಆಡಳಿತ ಮಂಡಳಿಯಲ್ಲಿ ಆದ ಅವ್ಯವಹಾರಗಳು ಯಾವುವು; ಹಾಗಿದ್ದಲ್ಲಿ, ಅವುಗಳನ್ನು ಸರಪಡಿಸಿ ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಹೊಸ ಪಿಂಚಣಿ ಯೋಜನೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೫೭೩ (೭೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ: ೦೧-೦೪-೨೦೦೬ ರಿಂದ ಜಾರಿಗೆ ತಂದಿರುವ ಹೊಸ ಪಿಂಚಣಿ ಯೋಜನೆಯು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಅನ್ವಯಿಸದಿರಲು ಕಾರಣಗಳೇನು ;

(ಆ) ೧೯೬೭ ರಿಂದ ಅನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೂ, ಸರ್ಕಾರಿ ನೌಕರರಿಗೆ ಸಿಗುವ ಎಲ್ಲ ಸೌಲಭ್ಯಗಳು ಅಂದರೆ ವೇತನ , ನಿವೃತ್ತಿ ವೇತನ, ವಾರ್ಷಿಕ ಬಡ್ತಿ, ಇಲ್ಲಿಯವರೆಗೆ ಒಂದೇ ಇದ್ದು ೦೧-೦೪-೨೦೦೬ರಿಂದ ಬದಲಾಗಲು ಕಾರಣಗಳೇನು; ಮತ್ತು ಇದನ್ನು ಸರಿಪಡಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ;

(ಇ) ಈ ಯೋಜನೆಯಿಂದ ಸರ್ಕಾರಕ್ಕೆ ಯಾವುದಾದರೂ ಆರ್ಥಿಕ ಹೊರೆ ಬೀಳುತ್ತದೆಯೇ; ಸದರಿ ವಿಷಯದಲ್ಲಿ ಆರ್ಥಿಕ ಹೊರೆ ಎಷ್ಟು ಬೀಳಬಹುದು ;

(ಈ) ಸರ್ಕಾರಿ ನೌಕರರಿಗೆ ಯಾವ ರೀತಿ ನಿಯಮಗಳಿವೆಯೋ, ಅದೇ ರೀತಿ ನಿಯಮಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೂ ವಿಸ್ತರಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ?

## ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರ ಸೇವಾ ಭದ್ರತೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೫೭೪ (೭೨೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಿಸುವ ಪ್ರಕ್ರಿಯೆ ಎಂದಿನಿಂದ ಪ್ರಾರಂಭ ವಾಗಿದೆ; ಇಲ್ಲಿ ಕೆಲಸ ಮಾಡುವವರ ಸಂಖ್ಯೆ ಎಷ್ಟು ;

(ಆ) ವಿಜ್ಞಾನ, ಕಲಾ, ವಾಣಿಜ್ಯ ಹಾಗೂ ಬೇರೆ ಬೇರೆ ವಿಷಯಗಳಲ್ಲಿ ಕೆಲಸ ಮಾಡುತ್ತಿರುವ ವಿಷಯವಾರು ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅನೇಕ ವರ್ಷಗಳಿಂದ ಇಲ್ಲಿ ಕೆಲಸ ಮಾಡುತ್ತಿರುವವರಿಗೆ ಯು.ಜಿ.ಸಿ. ನಿಯಮಾವಳಿಯಂತೆ ವೇತನ ಹಾಗೂ ಸೇವಾ ಭದ್ರತೆ, ನೇಮಕಾತಿ ಸಂದರ್ಭದಲ್ಲಿ ಇವರ ಸೇವೆಗೆ ಪ್ರಾಶಸ್ತ್ಯ ಹಾಗೂ ಇವರನ್ನು ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳವುದೇ ?

## ಮನೆ ಪಾಠದ ಕೇಂದ್ರಗಳ (ಟ್ಯೂಷನ್) ನೋಂದಣಿ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೭೫ (೭೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೧೯೮೩ರ ಕಾಯ್ದೆ ಪ್ರಕಾರ ನೋಂದಣಿಯಾಗಿರುವ ಟ್ಯೂಷನ್ ಕೇಂದ್ರಗಳೆಷ್ಟು ;

(ಆ) ಟ್ಯೂಷನ್ ಕೇಂದ್ರಗಳಿಂದ ವಸೂಲಾಗಿರುವ ಶುಲ್ಕವೆಷ್ಟು ;

(ಇ) ಸರ್ಕಾರಿ ಉಪನ್ಯಾಸಕರು ಟ್ಯೂಷನ್ ನಡೆಸುತ್ತಿರುವುದರ ಬಗ್ಗೆ ದಾಖಲಾಗಿರುವ ದೂರುಗಳೆಷ್ಟು ;

(ಈ) ಟ್ಯೂಷನ್ ಕೇಂದ್ರಗಳನ್ನು ಕಡ್ಡಾಯವಾಗಿ ದಾಖಲಿಸಲು ಕೈಗೊಂಡಿರುವ ಕ್ರಮಗಳೇನು ?

## ಲೋಕ ಶಿಕ್ಷಣ ನಿರ್ದೇಶನಾಲಯದ ಸಿಬ್ಬಂದಿ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೭೬ (೭೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಲೋಕ ಶಿಕ್ಷಣ ನಿರ್ದೇಶನಾಲಯದ ಕೇಂದ್ರ ಕಛೇರಿಯಲ್ಲಿ ಸೇವೆ ಸಲ್ಲಿಸಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು (ನಿರ್ದೇಶನಾಲಯದ ಖಾಯಂ ಸಿಬ್ಬಂದಿಗಳೂ ಸೇರಿದಂತೆ ನಿಯೋಜನೆ ಮತ್ತು ಓ.ಓ.ಡಿ. ಆಧಾರದ

ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗಳ ಹೆಸರು, ಹುದ್ದೆ ಸಮೇತ ವಿವರವನ್ನು ಅವರು ಸೇವೆಗೆ ಸೇರಿದ ದಿನಾಂಕದಿಂದ ನೀಡುವುದು ;

(ಆ) ನಿರ್ದೇಶಕರೂ ಸೇರಿದಂತೆ ನಿರ್ದೇಶನಾಲಯದಲ್ಲಿರುವ ಈ ಸಿಬ್ಬಂದಿಗಳಿಗೆ ಹಂಚಿಕೆ ಮಾಡಿರುವ ಕಾರ್ಯಭಾರಗಳೇನು ;

(ಇ) ಹಾಲಿ ನಿರ್ದೇಶಕರು ತಮ್ಮ ಎಲ್ಲಾ ಕಾರ್ಯಭಾರಗಳನ್ನು ಉಪ ನಿರ್ದೇಶಕರು (ಆಡಳಿತ) ಇವರಿಗೆ ಹಂಚಿಕೆ ಮಾಡಿರುವುದು ನಿಜವೇ ; ಉಪ ನಿರ್ದೇಶಕರು (ಆಡಳಿತ) ಇವರು ಹುದ್ದೆ ವಹಿಸಿಕೊಂಡಾಗಿನಿಂದ ತೆಗೆದುಕೊಂಡಿರುವ ತೀರ್ಮಾನಗಳು ಯಾವುವು (ಪೂರ್ಣ ವಿವರ ನೀಡುವುದು) ;

(ಈ) ಉಪ ನಿರ್ದೇಶಕರ (ಆಡಳಿತ) ಮಾತೃ ಇಲಾಖೆ ಯಾವುದು ; ಇವರ ಸೇವೆಯನ್ನು ಲೋಕ ಶಿಕ್ಷಣ ನಿರ್ದೇಶನಾಲಯದಲ್ಲಿ ವಿಲೀನಗೊಳಿಸಿದ್ದು ಯಾವಾಗ ; ಸೇವೆಯನ್ನು ಈ ರೀತಿ ವಿಲೀನಗೊಳಿಸಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಇದೆಯೇ ; ವಿಲೀನಗೊಳಿಸಲು ಪರಿಗಣಿಸಿದ ಅಂಶಗಳೇನು (ವಿವರ ನೀಡುವುದು) ?

**ಲೋಕ ಶಿಕ್ಷಣ ನಿರ್ದೇಶನಾಲಯದ ಕಛೇರಿ ಕಟ್ಟಡ ನವೀಕರಣ**

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೭೭ (೭೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಲೋಕಶಿಕ್ಷಣ ನಿರ್ದೇಶನಾಲಯದ ಕೇಂದ್ರ ಕಛೇರಿ ಕಟ್ಟಡದ ನವೀಕರಣ

ಕಾಮಗಾರಿ ಕೈಗೊಂಡಿದ್ದು ಯಾವಾಗ ; ಇದಕ್ಕಾಗಿ ವೆಚ್ಚ ಮಾಡಿರುವ ಹಣ ಎಷ್ಟು ; ಕಾಮಗಾರಿಯನ್ನು ಗುತ್ತಿಗೆ ನೀಡುದ್ದು ಯಾರಿಗೆ ;

(ಆ) ಕಟ್ಟಡ ನವೀಕರಣ ಕಾಮಗಾರಿ ಕೈಗೊಂಡಾಗ ನಿರ್ದೇಶನಾಲಯದಲ್ಲಿ ನವೀಕರಣ ಕಾಮಗಾರಿಗೆ ಅನುಮತಿ ನೀಡಿದವರು ಯಾರು ; ಕಾಮಗಾರಿಗೆ ಇಲಾಖೆಯ ಅನುಮತಿ ಪಡೆಯಲಾಗಿದೆಯೇ; ಇಲ್ಲದೇ ಇದ್ದಲ್ಲಿ ಕಾರಣವೇನು ?

## ಎ.ಡಿ.ಎ ಹಾಗೂ ಸಿ.ಡಿ.ಪಿ.ಒ ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೮ (೭೨೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಉಪ ನಿರ್ದೇಶಕರ ಕಛೇರಿಗೆ ಒಳಪಟ್ಟಿರುವ ಸಹಾಯಕ ನಿರ್ದೇಶಕರ ಕಛೇರಿ ಹಾಗೂ ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿ ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಮೂಡಿಗೆರೆಯಲ್ಲಿ, ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿರವರು ವರ್ಗಾವಣೆ ಆದಲ್ಲಿ, ಕಛೇರಿಗೆ ಬೀಗ ಹಾಕಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕ್ರಮ ಏಕೆ ಕೈಗೊಳ್ಳುತ್ತಿಲ್ಲ ?

## ಶಿಕ್ಷಕರುಗಳ ವರ್ಗಾವಣೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೯ (೭೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳು ಸೇವಾ ಅವಧಿಯಲ್ಲಿ ಒಮ್ಮೆ ಬೇರೊಂದು ಘಟಕಕ್ಕೆ ವರ್ಗಾವಣೆಯಾದಲ್ಲಿ ಮತ್ತೆ ಬೇರೆ ಜಿಲ್ಲೆಗಳಿಗೆ ವರ್ಗಾವಣೆಗೆ ಅವಕಾಶವಿರುವುದಿಲ್ಲ ಏಕೆ ;

(ಆ) ಇದರಿಂದ ಪತಿ–ಪತ್ನಿ ಪ್ರಕರಣದ ಶಿಕ್ಷಕರುಗಳಿಗೆ ಅನಾನುಕೂಲ ವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಏನು ಕ್ರಮ ಕೈಗೊಂಡಿದೆ ;

(ಇ) ಈಗಾಗಲೇ ಒಂದು ಘಟಕದಿಂದ ಬೇರೊಂದು ಘಟಕಕ್ಕೆ ವರ್ಗಾವಣೆಯಾಗಿರುವ ಶಿಕ್ಷಕರುಗಳಿಗೆ ಹಾಲಿ ಇರುವ ವರ್ಗಾವಣೆ ಕಾಯ್ದೆಯಡಿ ಯಾವ ರೀತಿಯಲ್ಲಿ ವಿನಾಯಿತಿ ನೀಡಲಾಗಿದೆ ಅಥವಾ ಇಲ್ಲವೇ ;

(ಈ) ಇಲ್ಲವಾದಲ್ಲಿ, ಅಂಗವಿಕಲರಿಗೆ ವಿಧವೆಯರಿಗೆ, ವೈದ್ಯಕೀಯ ಕಾರಣದ ವರ್ಗಾವಣೆಗಳಿಗೆ ಹೇಗೆ ಘಟಕ ನಿಬಂಧನೆಗಳಿಲ್ಲವೋ ಹಾಗೆಯೇ ಪತಿ–ಪತ್ನಿ ಪ್ರಕರಣದ ವರ್ಗಾವಣೆಗೆ ವಿನಾಯಿತಿ ನೀಡಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ?

## ಸರ್ವ ಶಿಕ್ಷಣ ಅಭಿಯಾನದಡಿ ಬಿಡುಗಡೆಯಾಗಿರುವ ಹಣ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೦ (೭೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ವ ಶಿಕ್ಷಣ ಅಭಿಯಾನದಡಿ ಇದುವರೆಗೂ ರಾಜ್ಯದಲ್ಲಿ ಜಿಲ್ಲಾವಾರು ಖರ್ಚು ಮಾಡಿರುವ ಹಣ ಎಷ್ಟು; ಅದರಲ್ಲಿ ಕೇಂದ್ರ ಸರ್ಕಾರದ ಅನುದಾನವೆಷ್ಟು ; ರಾಜ್ಯದ ಅನುದಾನವೆಷ್ಟು ;

(ಆ) ಸರ್ವ ಶಿಕ್ಷಣ ಅಭಿಯಾನದಡಿ ಶಿಕ್ಷಣಕ್ಕೆ ಬಿಡುಗಡೆಯಾದ ಹಣದಲ್ಲಿ ಎಷ್ಟು ಹಣ ವಿದ್ಯಾರ್ಥಿಗಳ ಅಭಿವೃದ್ಧಿಗೆ ಖರ್ಚಾಗಿದೆ ; ಶಿಕ್ಷಕರ ಕೌಶಲ್ಯ ತರಬೇತಿಗೆ ಎಷ್ಟು ವಿನಿಯೋಗವಾಗಿದೆ (ಜಿಲ್ಲಾವಾರು ವಿವರ ನೀಡುವುದು) ;

(ಇ) ಇದರಲ್ಲಿ ಇದುವರೆಗೂ ತಾಲ್ಲೂಕುವಾರು ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಅದರಲ್ಲಿ ಎಷ್ಟು ಖರ್ಚು ಮಾಡಲಾಗಿದೆ (ವಿವರ ಒದಗಿಸುವುದು) ?

## ಸರ್ಕಾರಿ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜು

**ಶ್ರೀ ಟಿ. ಜಾನ್ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೮೧ (೭೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಜಿಲ್ಲೆಯ ಯಾವ ಸ್ಥಳಗಳಿಗೆ ಕಳೆದ ೨ ವರ್ಷಗಳಲ್ಲಿ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಮಂಜೂರಾತಿ ನೀಡಲಾಗಿದೆ (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಸದರಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿಯಿರುವ ಉಪನ್ಯಾಸಕರು ಮತ್ತು ಶಿಕ್ಷಕರುಗಳ ಹುದ್ದೆಗಳನ್ನು ಸರ್ಕಾರ ಯಾವಾಗ ಭರ್ತಿ ಮಾಡುವುದು ? (ತಾಲ್ಲೂಕುವಾರು, ವಿಷಯವಾರು ವಿವರ ನೀಡುವುದು)

## ಭಾಷಾ ಅಲ್ಪಸಂಖ್ಯಾತ ಮತ್ತು ಧಾರ್ಮಿಕ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೮೨ (೭೩೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಘನ ಸರ್ವೋಚ್ಚ ನ್ಯಾಯಾಲಯದ ತೀರ್ಮಾನದಂತೆ, ಭಾಷಾ ಅಲ್ಪಸಂಖ್ಯಾತ ಮತ್ತು ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಅನುಸರಿಸಬೇಕಾದ ವಿದ್ಯಾರ್ಥಿಗಳ ಪ್ರವೇಶಾತಿ ನಿಯಮಗಳೇನು (ವಿವರ ನೀಡುವುದು) ;

(ಆ) ಬಹುತೇಕ ಶಿಕ್ಷಣ ಸಂಸ್ಥೆಗಳು ಈ ನಿಯಮಗಳನ್ನು ಉಲ್ಲಂಘಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವರ ಮೇಲೆ ಕೈಗೊಂಡಿರುವ ಕ್ರಮಗಳೇನು ;

(ಇ) ತಾವು ಯಾವ ಗುಂಪಿನ ಭಾಷಾ ಅಲ್ಪಸಂಖ್ಯಾತ ಮತ್ತು ಧರ್ಮ ಅಲ್ಪಸಂಖ್ಯಾತರೆಂದು ಗುರುತಿಸಿಕೊಂಡು ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸುವ ಆಡಳಿತ ಮಂಡಳಿಗಳು ತಮ್ಮ ಭಾಷಾ ಮತ್ತು ಧಾರ್ಮಿಕ ಸಮುದಾಯಗಳಿಗೆ ನೀಡಬೇಕಾದ ಕನಿಷ್ಠ ಮತ್ತು

ಗರಿಷ್ಠ ಪ್ರವೇಶಾತಿಗೆ ಸಂಬಂಧಪಟ್ಟಂತೆ ಯಾವ ನಿರ್ದಿಷ್ಟ ವಿಷಯವನ್ನು ಕರ್ನಾಟಕ ರಾಜ್ಯ ಪಾಲಿಸುತ್ತದೆ ?

## ನರೇಗಾ ಯೋಜನೆಯಲ್ಲಿ ನಡೆದಿರುವ ಭ್ರಷ್ಟಾಚಾರ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೫೮೩ (೭೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ನಾಲ್ಕು ವರ್ಷಗಳಲ್ಲಿ ನರೇಗಾ ಯೋಜನೆಯಲ್ಲಿ ರಾಜ್ಯದಲ್ಲಿ ವರದಿಯಾಗಿರುವ ಭ್ರಷ್ಟಾಚಾರದ ಪ್ರಕರಣಗಳು ಎಷ್ಟು ; (ಪ್ರಕರಣವಾರು ಮತ್ತ ಜಿಲ್ಲಾವಾರು ವಿವರ ನೀಡುವುದು)

(ಆ) ಈ ಎಲ್ಲಾ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟಾರೆ ಭ್ರಷ್ಟಾಚಾರ ವಾಗಿರುವ ಮೊತ್ತವೆಷ್ಟು (ಪ್ರಕರಣವಾರು ಮತ್ತು ಜಿಲ್ಲಾವಾರು ವಿವರ ನೀಡುವುದು) ;

(ಇ) ಈ ಪ್ರಕರಣಗಳಲ್ಲಿ ಸರ್ಕಾರಿ ಮತ್ತು ಸರ್ಕಾರೇತರರ ಮೇಲೆ ಮೊಕದ್ದಮೆ ಹೂಡಲಾಗಿರುವ ಪ್ರಕರಣಗಳೆಷ್ಟು (ಪ್ರಕರಣವಾರು ಮತ್ತು ಜಿಲ್ಲಾವಾರು ವಿವರ ನೀಡುವುದು ; ಇದರಲ್ಲಿ ಶಿಕ್ಷೆಗೆ ಒಳಗಾಗಿರುವ ವಿವರ ನೀಡುವುದು) ?

## ವಿಶ್ವವಿದ್ಯಾನಿಲಯುಗಳಲ್ಲಿನ ದಿನಗೂಲಿ ನೌಕರರು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೫೮೪ (೭೩೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರತಿ ವಿಶ್ವವಿದ್ಯಾಲಯಗಳಲ್ಲಿ ಖಾಯಂ ಬೋಧಕ, ಬೋಧಕೇತರ ಹುದ್ದೆಗಳು ಎಷ್ಟಿವೆ ; ಇವುಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು (ಹುದ್ದೆವಾರು ವಿವರ ನೀಡುವುದು) ;

-4 B/B

(ಆ) ಸದರಿ ವಿಶ್ವವಿದ್ಯಾಲಯಗಳಲ್ಲಿ ತಾತ್ಕಾಲಿಕ, ಗುತ್ತಿಗೆ ಆಧಾರದ ಮೇಲೆ, ದಿನಗೂಲಿ ಲೆಕ್ಕದಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ, ಬೋಧಕೇತರ ನೌಕರರ ಹುದ್ದೆವಾರು ವಿವರ ನಿಡುವುದು ;

(ಇ) ತಾತ್ಕಾಲಿಕ ಹುದ್ದೆಗಳ ಭರ್ತಿಗಾಗಿ ಬಹಳ ದೊಡ್ಡ ಮಟ್ಟದ ಭ್ರಷ್ಟಾಚಾರ, ಜಾತಿಯತೆ, ಸ್ವಜನ ಪಕ್ಷಪಾತ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಅಂಗನವಾಡಿಗಳ ಸ್ಥಿತಿ ಗತಿ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೮೫ (೭೩೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಇರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಸ್ವಂತ ಕಟ್ಟಡ ಹೊಂದಿಲ್ಲದ ಅಂಗನವಾಡಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ಒದಗಿಸುವುದು) ;

(ಆ) ಅಂಗನವಾಡಿಗಳಲ್ಲಿ ಮಕ್ಕಳಿಗೆ ಕುಡಿಯಲು ಶುದ್ಧ ಕುಡಿಯುವ ನೀರು ಪೂರೈಕೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಸದರಿ ಜಿಲ್ಲೆಗಳಲ್ಲಿರುವ ಎಷ್ಟು ಅಂಗನವಾಡಿಗಳಲ್ಲಿ ಶಿಕ್ಷಕರ/ ಅಂಗನವಾಡಿ ಮೇಲ್ವಿಚಾರಕರ ಕೊರತೆಯಿದೆ (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ (ವಿವರ ನೀಡುವುದು) ?

## ಜಿಲ್ಲಾ /ತಾಲ್ಲೂಕು ಉತ್ಸವಗಳು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೮೬ (೭೩೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ನಡೆಸಿರುವ ಜಿಲ್ಲಾ ಹಾಗೂ ತಾಲ್ಲೂಕು ಉತ್ಸವಗಳು ಎಷ್ಟು ;

(ಆ) ಇದಕ್ಕಾಗಿ ಬಿಡುಗಡೆಯಾಗಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು (ವರ್ಷವಾರು ವಿವರ ನೀಡುವುದು) ?

## ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೮೭ (೭೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಇರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಂಖ್ಯೆ ಎಷ್ಟು (ಅಂಕಿ ಅಂಶ ಒದಗಿಸುವುದು) ;

(ಆ) ಇದರಲ್ಲಿ ಮೂಲಸೌಕರ್ಯಗಳಾದ ಶುದ್ಧ ಕುಡಿಯುವ ನೀರು ಹಾಗೂ ಶೌಚಾಲಯ ವ್ಯವಸ್ಥೆ ಇಲ್ಲದ ಶಾಲೆಗಳು ಎಷ್ಟು (ವಿವರ ಒದಗಿಸುವುದು) ;

(ಇ) ಈ ಶಾಲೆಗಳಿಗೆ ಮೂಲಸೌಕರ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಮಾಹಿತಿ ನೀಡುವುದು) ?

## ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರ ಮಾಸಿಕ ಗೌರವಧನ ಏರಿಕೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೮೮ (೭೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯ್ತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ (ವಿವರ ಒದಗಿಸುವುದು) ;

(ಆ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ಬಹುತೇಕ ಗ್ರಾಮ ಪಂಚಾಯ್ತಿಗಳಲ್ಲಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಮಾಸಿಕ ಗೌರವಧನ ಸರಿಯಾದ ಸಮಯಕ್ಕೆ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಾಕಿ ಇರುವ ಗೌರವಧನ ಪಾವತಿಗೆ ಸರ್ಕಾರ ಕೈಗೊಂಡಿರುವ ಕ್ರಮ ಏನು (ವಿವರ ನೀಡುವುದು) ?

## ಸಿ.ಬಿ.ಎಸ್.ಸಿ. ಮಾದರಿಯಲ್ಲಿ ಶಿಕ್ಷಕ, ವಿದ್ಯಾರ್ಥಿಗಳ ಅನುಪಾತ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೫೮೯ (೭೪೩ಎ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಶಿಕ್ಷಕ ವಿದ್ಯಾರ್ಥಿಗಳ ಅನುಪಾತವೇನು (ವಿವರ ನೀಡುವುದು) ;

(ಆ) ಸಿ.ಸಿ.ಇ ಪರಿಣಾಮಕಾರಿ ಜಾರಿಗೆ ಅಗತ್ಯವಿರುವ ವಿದ್ಯಾರ್ಥಿಗಳ ಅನುಪಾತವೇನು ;

(ಇ) ರಾಜ್ಯದಲ್ಲಿ ಪ್ರೌಢಶಾಲಾ ಹಂತದಲ್ಲಿ ಸಿ.ಬಿ.ಎಸ್.ಸಿ. ಮಾದರಿಯಲ್ಲಿ ೩೦:೦೧ ಶಿಕ್ಷಕ, ವಿದ್ಯಾರ್ಥಿ ಅನುಪಾತ ನಿಗದಿಪಡಿಸಲು ಕ್ರಮವೇನು ?

## ಸಿ.ಬಿ.ಎಸ್.ಸಿ. ಶಾಲೆಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೫೯೦ (೭೪೩ಬಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಜಾಪುರ, ಬೆಳಗಾವಿ ಮತ್ತು ಬಾಗಲಕೋಟೆ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿ ನಡೆಯುತ್ತಿರುವ ಸಿ.ಬಿ.ಎಸ್.ಸಿ. ಶಾಲೆಗಳ ಸಂಖ್ಯೆ ಎಷ್ಟು ;

(ಆ) ಅವುಗಳ ಹೆಸರು, ಸ್ಥಳ, ವಿಳಾಸ, ತಾಲ್ಲೂಕುವಾರು, ಜಿಲ್ಲಾವಾರು ಸಂಪೂರ್ಣ ಪಟ್ಟಿ ನೀಡುವುದು ;

(ಇ) ಈ ಮೂರು ಜಿಲ್ಲೆಗಳಲ್ಲಿ ಸರ್ಕಾರ ಯಾವ ಯಾವ ಸಂಸ್ಥೆಗೆ ಎನ್.ಓ.ಸಿ. ನೀಡಿದೆ (ಜಿಲ್ಲಾವಾರು, ತಾಲ್ಲೂಕುವಾರು ಸಂಸ್ಥೆಗಳ ಪಟ್ಟಿ ನೀಡುವುದು) ;

(ಈ) ಈ ಸಂಸ್ಥೆಗಳ ಶುಲ್ಕ ಸಂರಚನೆ, ಪ್ರವೇಶಾತಿ ನೀತಿಯೇನು ?

## ಆರ್.ಟಿ.ಇ. ಕಾಯ್ದೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೫೯೧ (೭೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಆರ್.ಟಿ.ಇ. ಕಾಯ್ದೆಯ ಅನ್ವಯ ರಾಜ್ಯದ ವಿವಿಧ ಶಾಲೆಗಳಲ್ಲಿ ಪ್ರವೇಶ ಪಡೆದಿರುವ ಮಕ್ಕಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ೨೦೧೩–೧೪ನೇ ಸಾಲಿನಲ್ಲಿ ಎಷ್ಟು ಶಾಲೆಗಳಲ್ಲಿ ಆರ್.ಟಿ.ಇ. ಕಾಯ್ದೆಯಡಿ ದಾಖಲಾದ ಮಕ್ಕಳಿಗೆ ಸಂಬಂಧಿಸಿದಂತೆ ಅನುದಾನ ಬಿಡುಗಡೆಯಾಗಿದೆ (ಜಿಲ್ಲಾವಾರು ವಿವರ ನೀಡುವುದು) ;

(ಇ) ೨೦೧೩–೧೪ನೇ ಸಾಲಿನಲ್ಲಿ ಅರ್.ಟಿ.ಇ. ಕಾಯ್ದೆಯ ಮಾನದಂಡ ಗಳನ್ನು ಉಲ್ಲಂಘಿಸಿರುವ ಎಷ್ಟು ಶಾಲೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ (ಶಿಕ್ಷಣ ಸಂಸ್ಥೆಯ ಹೆಸರಿನೊಂದಿಗೆ ವಿವರ ನೀಡುವುದು) ?

## ಎನ್.ಸಿ.ಸಿ. ಅಧಿಕಾರಿಗಳಿಗೆ ನೀಡುವ ಗೌರವ ಧನ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೫೯೨ (೭೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ. ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಬೇರೆ ಬೇರೆ ವರ್ಗದ ಅಧಿಕಾರಿಗಳಿಗೆ ನೀಡುವ ಗೌರವ ಧನವನ್ನು ಎಂದು ನಿರ್ಣಯಿಸಲಾಗಿತ್ತು (ಯಾವ ದಿನಾಂಕದಂದು) ;

(ಆ) ವಿದ್ಯಾರ್ಥಿಗಳಲ್ಲಿ ಸೇನೆಗಳ ಬಗ್ಗೆ ಆಸಕ್ತಿ, ಶಿಸ್ತು ಹಾಗೂ ರಾಷ್ಟ್ರ ಭಕ್ತಿಯ ಬಗ್ಗೆ ವಿಶೇಷ ಆಸಕ್ತಿ ವಹಿಸಿ ತರಬೇತಿ ನೀಡುತ್ತಿರುವ ಈ ಅಧಿಕಾರಿಗಳ ಗೌರವ ಧನವನ್ನು ಕನಿಷ್ಠ ೩ ವರ್ಷಗಳಿಗೊಮ್ಮೆ ಯಾದರೂ ಹೆಚ್ಚಿಸುವ ಯೋಚನೆ ಸರ್ಕಾರದ ಮುಂದಿದೆಯೇ ;

(ಇ) ರಾಜ್ಯದ ವಿವಿಧ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ. ಅಧಿಕಾರಿಗಳಾಗಿ ಗೌರವದ ಸೇವೆ ಸಲ್ಲಿಸುತ್ತಿರುವ ಶಿಕ್ಷಕ ಉಪನ್ಯಾಸಕರ ಒಟ್ಟು ಸಂಖ್ಯೆ ಎಷ್ಟು ;

(ಈ) ಈ ಶಿಕ್ಷಕ ಉಪನ್ಯಾಸಕರ ಗೌರವ ಧನವನ್ನು ಕೂಡಲೇ ಪರಿಷ್ಕರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಶಾಲೆಗಳಲ್ಲಿ ಮಕ್ಕಳಿಗಾಗುತ್ತಿರುವ ಹಿಂಸೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೫೯೩ (೭೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಿಂದ ಮಕ್ಕಳ ಮೇಲೆ ಶಾಲೆಗಳಲ್ಲಿ ಹಿಂಸೆಯಾಗಿರುವ ಎಷ್ಟು ಪ್ರಕರಣಗಳು ನಡೆದಿವೆ ; ಈ ರೀತಿಯಾಗಿ

ಮಕ್ಕಳಿಗೆ ಹಿಂಸೆ ನೀಡಿರುವ ವ್ಯಕ್ತಿಗಳ/ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಎಷ್ಟು ಪ್ರಕರಣಗಳಲ್ಲಿ ದೂರು ದಾಖಲಾಗಿದೆ ; ಈಗ ಅವು ಯಾವ ಹಂತದಲ್ಲಿದೆ (ಜಿಲ್ಲಾವಾರು ವಿವರ ನೀಡುವುದು) ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೫೯೪ (೭೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದ ಎಷ್ಟು ಸರ್ಕಾರಿ ಕಾಲೇಜುಗಳಲ್ಲಿ ಪೂರ್ಣ ಕಾಲಿಕ ಪ್ರಾಂಶುಪಾಲರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಇ) ಈ ಕೊರತೆಗಳನ್ನು ತುಂಬಲು ಏನು ಕ್ರಮ ಕೈಗೊಳ್ಳಲಾಗುವುದು ?

## ರಸ್ತೆಗಳ ಅಭಿವೃದ್ಧಿ ಹಣ ಬಿಡುಗಡೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೫೯೫ (೭೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೨ ರಿಂದ ೨೦೧೪ನೇ ಸಾಲಿನವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಅಡಿಯಲ್ಲಿ ಬೀದರ್ ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರಕ್ಕೆ

ಮಂಜೂರು ಮಾಡಲಾಗಿರುವ ಅನುದಾನದ ಮೊತ್ತವೆಷ್ಟು (ಯೋಜನೆಗಳವಾರು, ವಿಧಾನ ಸಭಾವಾರು ವಿವರ ನೀಡುವುದು);

(ಆ) ಇಲ್ಲಿಯವರೆಗೆ ಯಾವ ಯಾವ ರಸ್ತೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ (ಸಂಪೂರ್ಣ ವಿವರವಾದ ಮಾಹಿತಿ ನೀಡುವುದು) ;

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೇಂದ್ರ ಹಾಗೂ ರಾಜ್ಯ ಸರಕಾರದ ಅನುದಾನದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ (ಯೋಜನೆಗಳ ವಿವರ ನೀಡುವುದು) ;

(ಈ) ಬೀದರ್ ವಿಧಾನಸಭಾ ಕ್ಷೇತ್ರದ ರಸ್ತೆಗಳ ದುರಸ್ತಿಗೆ ೩ ವರ್ಷದಲ್ಲಿ ಯಾವ ರಸ್ತೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ (ವಿವರ ನೀಡುವುದು) ?

**ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಭಿವೃದ್ಧಿ**

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೫೯೬ (೭೪೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ ಜಿಲ್ಲಾ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಯಾವ ಯಾವ ಕಾಲೇಜುಗಳಲ್ಲಿ ಕೊರತೆ ಇದೆ (ವಿವರ ನೀಡುವುದು) ; ಕಟ್ಟಡ ಮತ್ತು ಸಿಬ್ಬಂದಿಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; ಯಾವ ಕಾಲ

ಮಿತಿಯೊಳಗೆ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದು (ಎಲ್ಲಾ ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು) ?

## ಗ್ರಾಮ ಪಂಚಾಯತ್ ಕಾಮಗಾರಿಗಳ ಅಭಿವೃದ್ಧಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೫೯೭ (೭೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ ಜಿಲ್ಲೆಯ ಆರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳಿವೆ (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಈ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೂ ಐದು ವರ್ಷಗಳಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಪ್ರತ್ಯೇಕ ಗ್ರಾಮ ಪಂಚಾಯತ್‌ವಾರು ಮತ್ತು ಕಾಮಗಾರಿವಾರು ಯಾವ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಹಣ ಮಂಜೂರಾತಿ ನೀಡಲಾಗಿದೆ (ಎಲ್ಲಾ ಗ್ರಾಮ ಪಂಚಾಯತ್ ಮತ್ತು ವರ್ಷವಾರು ಮಾಹಿತಿ ನೀಡುವುದು) ;

(ಇ) ಹಾಗೇ ಕಾಮಗಾರಿಗಳನ್ನು ಕೈಗೊಂಡಲ್ಲಿ ಪ್ರತಿ ಗ್ರಾಮ ಪಂಚಾಯತ್‌ಗೆ ಒಳಪಡುವ ಗ್ರಾಮಗಳೆಷ್ಟು ; ಹಾಗೆಯೇ ಆ ಗ್ರಾಮಗಳಲ್ಲಿ ೫ ವರ್ಷಗಳಿಂದ ಕೈಗೊಂಡ ಯೋಜನೆಗಳು ಯಾವುವು ; ಕಾಮಗಾರಿಗೆ ತಗಲಿದ ವೆಚ್ಚ ಎಷ್ಟು (ಪ್ರತ್ಯೇಕ

ಯೋಜನೆವಾರು, ಗ್ರಾಮ ಪಂಚಾಯತಿವಾರು ಮತ್ತು ಗ್ರಾಮವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು) ?

## ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೫೯೮ (೭೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳ ಅಭಿವೃದ್ಧಿಗಾಗಿ ಪ್ರತಿ ವರ್ಷ ಯಾವ ಯಾವ ಯೋಜನೆ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ ;

(ಆ) ಗ್ರಾಮ ಪಂಚಾಯಿತಿಗೆ ಬಿಡುಗಡೆಯಾದ ಅನುದಾನದಲ್ಲಿ ಕ್ರಿಯಾ ಯೋಜನೆಯನ್ನು ತಯಾರಿಸಲು ಮಾನದಂಡಗಳೇನು (ಪೂರ್ಣ ಮಾಹಿತಿಯನ್ನು ನೀಡುವುದು) ;

(ಇ) ಸರ್ಕಾರದಿಂದ ಬಿಡುಗಡೆಯಾದ ಅನುದಾನಕ್ಕೆ ಅನುಗುಣವಾಗಿ ಸರ್ಕಾರದ ಮಾರ್ಗಸೂಚಿಗಳಂತೆ ಗ್ರಾಮಪಂಚಾಯಿತಿ ಮಟ್ಟದಲ್ಲಿ ಕ್ರಿಯಾ ಯೋಜನೆಯನ್ನು ತಯಾರಿಸಿ, ಅವರ ಹಂತದಲ್ಲಿ ಅನುಮೋದಿಸಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿ ಮತ್ತು ಆದೇಶ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

# ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತಕ್ಕೆ ಜಮೀನು ಖರೀದಿ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೫೯೯ (೭೫೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಸತಿ ಇಲಾಖೆಯ ವ್ಯಾಪ್ತಿಗೆ ಬರುವ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದಿಂದ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಎಷ್ಟು ಎಕರೆ ಜಮೀನನ್ನು ಖರೀದಿಸಲಾಗಿದೆ (ವಿವರ ಒದಗಿಸುವುದು) ; ಹಾಗೂ ಖರೀದಿಸಿದ ಜಮೀನಿಗೆ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ;

(ಆ) ವಸತಿ ಯೋಜನೆಗಾಗಿ ಖರೀದಿಸಿದ ಜಮೀನಿನಲ್ಲಿ ನಿವೇಶನ ರಚಿಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ನಿವೇಶನಗಳನ್ನು ರಚಿಸಿ, ಫಲಾನುಭವಿಗಳಿಗೆ ನೀಡಲಾಗಿದೆ (ವಿವರ ನೀಡುವುದು) ; ಈ ಬಗ್ಗೆ ೨೦೧೧-೧೨, ೨೦೧೨-೧೩ ಹಾಗೂ ೨೦೧೩-೧೪ನೆ ಸಾಲಿನ ತಾಲ್ಲೂಕುವಾರು ವಿವರ ಒದಗಿಸುವುದು ಹಾಗೂ ನಗರ ಸ್ಥಳೀಯ ಸಂಸ್ಥೆ ಸೇರಿದಂತೆ ಪ್ರತ್ಯೇಕ ವಿವರ ನೀಡುವುದು ;

(ಇ) ೨೦೧೧-೧೨ ಮತ್ತು ೨೦೧೨-೧೩ರಲ್ಲಿ ಎಷ್ಟು ಗುಂಪು ಮನೆಗಳನ್ನು ನಿರ್ಮಿಸಲು ಅನುಮೋದನೆ ನೀಡಲಾಗಿದೆ (ವಿವರ ನೀಡುವುದು) ;

(ಈ) ೨೦೧೩-೧೪ರ ಹೊಸ ಸರ್ಕಾರದಲ್ಲಿ ಕಡು ಬಡವರಿಗಾಗಿ ಎಷ್ಟು ಗುಂಪು ಮನೆಗಳನ್ನು ನಿರ್ಮಿಸಲು ಅನುಮೋದನೆ ನೀಡಲಾಗಿದೆ (ಈ ಬಗ್ಗೆ ಸಂಪೂರ್ಣ ವಿವರ ಒದಗಿಸುವುದು) ?

## ಕಳಪೆ ಮದ್ಯ ಮಾರಾಟ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೦೦ (೭೭೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮವಾಗಿ ಕಳಪೆ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ. ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಕಳಪೆ ಮದ್ಯ ಮಾರಾಟವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ಮಾಹಿತಿ ನೀಡುವುದು) ?

## ಕೆ. ಬೆಳ್ಳೂರು ಇತರೆ ಗ್ರಾಮಗಳಿಗೆ ನೀರು ಸರಬರಾಜು

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೦೧ (೭೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕು ಕೆ. ಬೆಳ್ಳೂರು ಇತರ ೩೬ ಗ್ರಾಮಗಳಿಗೆ ಸಬ್ ಮಿಷನ್ ಯೋಜನೆಯಡಿಯಲ್ಲಿ ಕಾಮಗಾರಿಯನ್ನು ನಿಗದಿಪಡಿಸಿರುವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಿಂದಿನ ಆರ್.ಡಿ.ಪಿ.ಆರ್. ಸಚಿವರು ಕಾಮಗಾರಿಯನ್ನು ೨೦೧೨ರೊಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸ

ಲಾಗುವುದೆಂದು ಸದನದಲ್ಲಿ ಮತ್ತು ಸಭೆಯಲ್ಲಿ ತಿಳಿಸಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು (ಪೂರ್ಣ ಮಾಹಿತಿಯನ್ನು ನೀಡುವುದು) ;

(ಇ) ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಇನ್ನೂ ಎಷ್ಟು ಕಾಲಾವಕಾಶಗಳು ಬೇಕು ;

(ಈ) ಈ ಕಾಮಗಾರಿ ಮಂದಗತಿಯಲ್ಲಿ ಸಾಗಲು ಕಾರಣ ಯಾರು ; ಇವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ಅನುದಾನಿತ ಶಾಲೆಗಳ ಸಿಬ್ಬಂದಿಗಳಿಗೆ ವೇತನ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೦೨ (೭೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೂತನವಾಗಿ ವೇತನಕ್ಕೆ ಒಳಪಟ್ಟ ಶಾಲೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೊಸದಾಗಿ ವೇತನಕ್ಕೆ ಒಳಪಟ್ಟ ಅನುದಾನಿತ ಶಾಲೆಗಳಿಗೆ ಇನ್ನೂ ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ವೇತನಕ್ಕೆ ಒಳಪಟ್ಟ ಅನುದಾನಿತ ಶಾಲೆಗಳಿಗೆ ವೇತನ ನೀಡಲು ಸರ್ಕಾರದಲ್ಲಿ ಅನುದಾನದ ಕೊರತೆಯೇ;

(ಈ) ಅನುದಾನದ ಕೊರತೆಯನ್ನು ನೀಗಿಸಿ, ವೇತನಕ್ಕೆ ಒಳಪಟ್ಟ ಶಾಲೆಗಳಿಗೆ ಯಾವಾಗ ವೇತನವನ್ನು ನೀಡಲಾಗುವುದು? (ಪೂರ್ಣ ಮಾಹಿತಿ ನೀಡುವುದು)

## ದ್ವಿತೀಯ ಪಿ.ಯು.ಸಿ. ಪಠ್ಯಪುಸ್ತಕಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೬೦೩ (೭೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ತರಗತಿಗಳು ತೆರೆದ ದಿನಾಂಕ ಯಾವುವು;

(ಆ) ಸದರಿ ತರಗತಿಗೆ ಸಿ.ಬಿ.ಎಸ್.ಸಿ. ಮಾದರಿಯ ಪಠ್ಯಕ್ರಮ ಪ್ರಾರಂಭವಾಗಿದೆಯೆ; ಆಗಿದ್ದಲ್ಲಿ, ಯಾವ ವರ್ಷದಿಂದ;

(ಇ) ದ್ವಿತೀಯ ಪಿ.ಯು.ಸಿ.ಯ ಎಲ್ಲಾ ಪಠ್ಯಪುಸ್ತಕಗಳು ಈಗ ಲಭ್ಯವಿದೆಯೆ; (ವಿವರ ನೀಡುವುದು)

(ಈ) ಪಠ್ಯಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಒದಗಿಸಲು ಬೇಕಾಗುವ ಕಾಲಾವಧಿ ಏನು?

## ಪದವಿ ಪೂರ್ವ ಮಟ್ಟದ ಕಾಲೇಜುಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೬೦೪ (೭೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಪ್ರೌಢಶಾಲೆ ಹಾಗೂ ಪದವಿ ಪೂರ್ವ ಮಟ್ಟದ ಕಾಲೇಜುಗಳು ಸ್ವಂತ ಶೌಚಾಲಯ ಕೊರತೆ ಎದುರಿಸುತ್ತಿವೆ;

(ಆ) ಕೊರತೆ ಎದುರಿಸುತ್ತಿರುವ ಪ್ರೌಢಶಾಲೆ ಮತ್ತು ಕಾಲೇಜುಗಳಲ್ಲಿ ಶೌಚಾಲಯ ನಿರ್ಮಿಸಲು ಬೇಕಾಗುವ ಹಣ ಮತ್ತು ಕಾಲಾವಧಿ ಎಷ್ಟು ?

## ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೬೦೫ (೭೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ಸರ್ಕಾರಿ ಪ್ರೌಢಶಾಲೆ ಶಿಕ್ಷಕರಾಗಿ ಬಡ್ತಿ ಹೊಂದಿದ್ದು ಅವರುಗಳ ವರ್ಗಾವಣೆ ಪ್ರಕ್ರಿಯೆಯಲ್ಲಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಶಿಕ್ಷಕರುಗಳ ಪ್ರಾಥಮಿಕ ಸೇವಾ ಅವಧಿಯನ್ನು ವರ್ಗಾವಣೆ ಪ್ರಕ್ರಿಯೆಯಲ್ಲಿ ಪರಿಗಣಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಡ್ತಿ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೬೦೬ (೭೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಶಿಕ್ಷಕರಾಗಿ ಬಡ್ತಿ ನೀಡಲಾದ ಶಿಕ್ಷಕರ ಸಂಖ್ಯೆ ಎಷ್ಟು; (ವಲಯವಾರು ವಿವರ ನೀಡುವುದು)

(ಆ) ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದ ಬಲದಲ್ಲಿ ಇಂತಹ ಶಿಕ್ಷಕರ ಶೇಕಡ ಪ್ರಮಾಣ ಎಷ್ಟು;

(ಇ) ಇಂತಹ ಶಿಕ್ಷಕರು ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಹುದ್ದೆಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಶಿಕ್ಷಕರುಗಳಿಗೆ ನ್ಯಾಯವನ್ನು ಒದಗಿಸಲು ಸರ್ಕಾರ ಚಿಂತಿಸಿದೆಯೇ ?

## ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ನೀಡಿದ ಬಡ್ತಿಯ ನಂತರ ಕಾಲಮಿತಿ ವೇತನ ಬಡ್ತಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೦೭ (೭೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಂದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಾಗಿ ಬಡ್ತಿ ಹೊಂದಿರುವ ಶಿಕ್ಷಕರುಗಳು ೧೦, ೧೫, ೨೦ ವರ್ಷಗಳ ಕಾಲಮಿತಿ ವೇತನ ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳಲು ಚಿಂತಿಸಿದೆ ?

## ಗಣಕ ಯಂತ್ರ ಕಲಿಕೆ ಕಡ್ಡಾಯ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೦೮ (೭೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಗಣಕಯಂತ್ರ ಕಲಿಕೆ ಕಡ್ಡಾಯ ಆಗುತ್ತಿದೆಯೇ;

.5B/B

(ಆ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಗಣಕಯಂತ್ರ ಇಲ್ಲದೇ ಇರುವ ಶಾಲೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗಣಕಯಂತ್ರ ಕಲಿಕೆ ಶಿಕ್ಷಕರನ್ನು ಖಾಯಂ ಆಗಿ ನೇಮಿಸುವ ಪದ್ಧತಿಯ ಬಗ್ಗೆ ವಿವರಣೆ ನೀಡುವುದು;

(ಈ) ಖಾಯಂ ಆಗಿ ಕೆಲಸ ನಿರ್ವಹಿಸುತ್ತಿರುವ ಗಣಕಯಂತ್ರ ಶಿಕ್ಷಕರ ಜಿಲ್ಲಾವಾರು ವಿವರ ನೀಡುವುದು;

(ಉ) ಶಾಲೆಗೊಬ್ಬ ಗಣಕಯಂತ್ರ ಶಿಕ್ಷಕರನ್ನು ಖಾಯಂ ಆಗಿ ನೇಮಿಸುವ ಕುರಿತು ಸರ್ಕಾರಕ್ಕೆ ಇರುವ ತೊಂದರೆಗಳೇನು?

## ಉಪನ್ಯಾಸಕರುಗಳಿಗೆ ಪ್ರಶಿಕ್ಷಣ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೬೦೯ (೭೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರುಗಳಿಗೆ ಪ್ರಶಿಕ್ಷಣದ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ;

(ಆ) ಇತ್ತೀಚೆಗೆ ನೇಮಕಗೊಂಡಿರುವ ಪದವಿ ಪೂರ್ವ ಉಪನ್ಯಾಸಕರುಗಳಿಗೆ ಎಷ್ಟು ವರ್ಷದ ಅವಧಿಯಲ್ಲಿ ಬಿ.ಎಡ್., ವಿದ್ಯಾರ್ಹತೆ ಪಡೆಯುವಂತೆ ಸೂಚನೆ ನೀಡಲಾಗಿದೆ;

(ಇ) ರಾಜ್ಯದಲ್ಲಿ ಈ ರೀತಿ ಬಿ.ಎಡ್., ಶಿಕ್ಷಣ ಪೂರೈಸಿಕೊಳ್ಳಬೇಕಾಗಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು;

(ಈ) ಲಭ್ಯವಿರುವ ಬಿ.ಎಡ್., ವಾರ್ಷಿಕ ಪ್ರವೇಶಾವಕಾಶಗಳೆಷ್ಟು;

(ಉ) ಪ್ರಸ್ತುತ ಬಿ.ಎಡ್., ಪಠ್ಯಕ್ರಮ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರುಗಳ ಶಿಕ್ಷಣ ಮಟ್ಟವನ್ನು ಉತ್ತಮಗೊಳಿಸುವಲ್ಲಿ ಪೂರಕವಾಗಿದೆಯೇ; ಈಗಿರುವ ಬಿ.ಎಡ್., ಪಠ್ಯಕ್ರಮ ಪ್ರೌಢಶಾಲಾ ಶಿಕ್ಷಕರ ತರಬೇತಿಗೆ ಪೂರಕವಾಗಿದ್ದು, ಉಪನ್ಯಾಸಕರುಗಳ ತರಬೇತಿಗೆ ಬೇರೆ ಪ್ರಶಿಕ್ಷಣ ವ್ಯವಸ್ಥೆಯ ಚಿಂತನೆ ಸರ್ಕಾರದ ಮುಂದಿದೆಯೇ?

## ಅಕ್ರಮ ಮದ್ಯ ಮಾರಾಟ/ಸಿಎಲ್-೯, ಸಿಎಲ್-೨, ಲೈಸೆನ್ಸ್‌ಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೧೦ (೭೬೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಾರಾಯಿ ನಿಷೇಧ ಮಾಡಿದ ಮೇಲೆ ಅಕ್ರಮ ಮದ್ಯ ಮಾರಾಟ ಮತ್ತು ಕಳ್ಳಭಟ್ಟಿ ಸಾರಾಯಿ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ಮೂರು ವರ್ಷಗಳಲ್ಲಿ ವರದಿಯಾಗಿರುವ ಅಕ್ರಮ ಮದ್ಯ ಮಾರಾಟ ಮತ್ತು ಕಳ್ಳಭಟ್ಟಿ ಸಾರಾಯಿ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಹಾಲಿ ಇರುವ ಸಿಎಲ್-೯ ಮತ್ತು ಸಿಎಲ್-೨ ಲೈಸೆನ್ಸ್ ಹೊಂದಿರುವ ಮದ್ಯ ಮಾರಾಟದ ಅಂಗಡಿಗಳು/ಬಾರ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸಿಎಲ್-೯ ಮತ್ತು ಸಿಎಲ್-೨ ಲೈಸೆನ್ಸ್ ನೀಡುವುದನ್ನು ಯಾವಾಗಿನಿಂದ ನಿಲ್ಲಿಸಲಾಗಿದೆ; ಇದಕ್ಕೆ ಕಾರಣಗಳೇನು; ಈ ಲೈಸೆನ್ಸ್ ನೀಡಿಕೆಯನ್ನು ನಿಲ್ಲಿಸುವಾಗ ಇದ್ದ ಅಂದಾಜು ರಾಜ್ಯ ಜನಸಂಖ್ಯೆ/ಮದ್ಯಪಾನಿಗಳ ಸಂಖ್ಯೆ ಎಷ್ಟು; ಈ ಬಗ್ಗೆ ಯಾವುದಾದರೂ ಸಮೀಕ್ಷೆ ನಡೆಸಲಾಗಿದೆಯೇ; (ಅಂಕಿ ಅಂಶಗಳಿದ್ದರೆ ಒದಗಿಸುವುದು)

(ಈ) ಸಿಎಲ್-೯ ಮತ್ತು ಸಿಎಲ್-೨ ಲೈಸೆನ್ಸ್ ಹೊಂದಿರುವ ಅಂಗಡಿಗಳ ಸಂಖ್ಯೆ ಕಡಿಮೆ ಇರುವುದರಿಂದ ಅಕ್ರಮ ಮದ್ಯ ಮಾರಾಟ (ಸೆಕೆಂಡ್ಸ್-ಥರ್ಡ್) ಜಾಸ್ತಿ ಆಗುತ್ತಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಜಯಪುರ ಹೋಬಳಿಯಲ್ಲಿ ಕುಡಿಯುವ ನೀರಿನ ಅಭಾವ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೧೧ (೭೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ತಾಲ್ಲೂಕು ಜಯಪುರ ಹೋಬಳಿಯ ಎಷ್ಟು ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಇದೆ; ಈ ಕುಡಿಯುವ ನೀರಿನ ಅಭಾವವನ್ನು ಹೋಗಲಾಡಿಸಲು ಕೈಗೊಂಡಿರುವ ಕ್ರಮಗಳೇನು; ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲು ಪ್ರತಿನಿತ್ಯ ಎಷ್ಟು ವೆಚ್ಚ ಮಾಡಲಾಗಿದೆ; ಇದುವರೆಗೆ ಮಾಡಿರುವ ವೆಚ್ಚ ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ತಳೂರು ಶಾಶ್ವತ ಕುಡಿಯುವ ನೀರಿನ ಯೋಜನೆಗೆ ಎಷ್ಟು ಗ್ರಾಮಗಳು ಸೇರಿವೆ; ಅವು ಯಾವುವು; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು; ಈ ಯೋಜನೆ ಯಾವ ಹಂತದಲ್ಲಿದೆ; ಯಾವಾಗ ಮುಕ್ತಾಯವಾಗುತ್ತದೆ ?

## ಆಶ್ರಯ ಕಾಲೋನಿಯ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೧೨ (೭೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಳಂದೂರು ತಾಲ್ಲೂಕು, ಮಂಬಳ್ಳಿ ಗ್ರಾಮದ ಸುವರ್ಣಾವತಿ ನದಿ ಬೀದಿಯ ಸರ್ಕಾರಿ ಶಾಲೆಯ ಹಿಂಭಾಗದಲ್ಲಿರುವ ಆಶ್ರಯ ಕಾಲೋನಿಗೆ ಕುಡಿಯುವ ನೀರು, ರಸ್ತೆ, ವಿದ್ಯುತ್ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಾಲೋನಿಯನ್ನು ಯಾವಾಗ ನಿರ್ಮಿಸಲಾಯಿತು; ಇಲ್ಲಿ ಎಷ್ಟು ಕುಟುಂಬಗಳು ವಾಸಿಸುತ್ತಿವೆ; ಈ ಕಾಲೋನಿಯನ್ನು ಕಂದಾಯ ಗ್ರಾಮ ಎಂದು ಪರಿಗಣಿಸಿ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿ ಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಈ ಕಾಲೋನಿಯವರು ೨೫ ವರ್ಷಗಳಿಂದ ಯಾವುದೇ ಸೌಲಭ್ಯ ಇಲ್ಲದೆ ಜೀವಿಸುತ್ತಾ ತೊಂದರೆಗೆ ಒಳಗಾಗಿರುವುದು ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೂಡಲೇ ಸೂಕ್ತ ಕ್ರಮ ಜರುಗಿಸಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ?

## ಕುಡಿಯುವ ನೀರಿನ ಅಭಾವ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೧೩ (೭೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಜಿಲ್ಲೆಯ ಎಷ್ಟು ಹಳ್ಳಿಗಳಲ್ಲಿ ಕುಡಿಯುವ ನೀರಿನ ಅಭಾವ ಇದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮೂಲಕ ಜಿಲ್ಲೆಯ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸುವ ಯೋಜನೆ ಹಾಕಿಕೊಳ್ಳಲಾಗಿದೆ; ಈ ಯೋಜನೆಗಳು ಯಾವ ಹಂತದಲ್ಲಿದೆ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ನದಿ ಮೂಲದಿಂದ ಶಾಶ್ವತ ಕುಡಿಯುವ ನೀರು ಪೂರೈಕೆ ವ್ಯವಸ್ಥೆಗೆ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ವಿವರಗಳನ್ನು ಒದಗಿಸುವುದು)

## ದೈಹಿಕ ಶಿಕ್ಷಣ ಶಾಲಾ ಶಿಕ್ಷಕರನ್ನು ಅನುದಾನಕ್ಕೊಳಪಡಿಸುವುದು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೧೪ (೭೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೦೯ನೇ ಸಾಲಿನಿಂದ ಇದುವರೆವಿಗೂ ಖಾಸಗಿ ಪ್ರಾಥಮಿಕ ಶಾಲೆಗಳನ್ನು ಸರ್ಕಾರದ ಸಹಾಯಾನುದಾನಕ್ಕೆ ಒಳಪಡಿಸುವ

ಸಂದರ್ಭದಲ್ಲಿ ವಿವಿಧ ಕಾರಣಗಳಿಂದ ದೈಹಿಕ ಶಿಕ್ಷಣ ಶಿಕ್ಷಕರನ್ನು ಹೊರತುಪಡಿಸಿದ ಪ್ರಕರಣಗಳು ಎಷ್ಟು ; (ಶಾಲಾವಾರು ವಿವರ ನೀಡುವುದು)

(ಆ) ಸದರಿ ದೈಹಿಕ ಶಿಕ್ಷಣ ಶಿಕ್ಷಕರನ್ನು ಇದುವರೆವಿಗೂ ಸರ್ಕಾರದ ಸಹಾಯಾನುದಾನಕ್ಕೆ ಒಳಪಡಿಸದೇ ಇರಲು ಕಾರಣವೇನು; ಮತ್ತು ಇವರನ್ನು ಯಾವಾಗ ಸರ್ಕಾರದ ಸಹಾಯಾನುದಾನಕ್ಕೆ ಒಳಪಡಿಸಲಾಗುವುದು?

## ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೧೫ (೭೭೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಪ್ರೌಢ ಶಾಲಾ ವಿದ್ಯಾರ್ಥಿಗಳು ಕಳೆದ ೫ ವರ್ಷಗಳಿಂದ ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಐ.ಸಿ.ಟಿ., ಫೇಜ್-III ಯೋಜನೆಯಲ್ಲಿ ಕರ್ನಾಟಕ ರಾಜ್ಯ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ಒದಗಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

(ಇ) ಇದ್ದಲ್ಲಿ, ವಿಳಂಬವಾಗಲು ಕಾರಣವೇನು; ಹಾಗೂ ಈ ಯೋಜನೆಯಲ್ಲಿ ಯಾವಾಗಿನಿಂದ ಕಂಪ್ಯೂಟರ್ ಶಿಕ್ಷಣ ಒದಗಿಸಲಾಗುವುದು ;

(ಈ) ೨೦೦೯ನೇ ಸಾಲಿನಿಂದ ಈವರೆವಿಗೂ ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ ೩೨ ರೀತ್ಯಾ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಅದರ ಸಮಾನಾಂತರ ಹುದ್ದೆಗಳಿಗೆ ಪ್ರಭಾರದಲ್ಲಿರಿಸಿರುವ ಅಧಿಕಾರಿಗಳ ಸಂಖ್ಯೆ ಎಷ್ಟು; (ಹೆಸರುಗಳೊಂದಿಗೆ ಸಂಪೂರ್ಣ ವಿವರ ನೀಡುವುದು) ಇವರುಗಳಿಗೆ ಈವರೆವಿಗೂ ಸ್ಥಾನಪನ್ನ ಬಡ್ತಿ ನೀಡಲು ವಿಳಂಬ ಮಾಡುತ್ತಿರಲು ಕಾರಣವೇನು; ಹಾಗೂ ಇವರುಗಳಿಗೆ ಯಾವಾಗ ಸ್ಥಾನಪನ್ನ ಬಡ್ತಿ ನೀಡಲಾಗುವುದು?

## ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೧೬ (೭೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ಮರಣದ ಕಾರಣದಿಂದ ಉದ್ಭವಿಸಿರುವ ಖಾಲಿ ಹುದ್ದೆಗಳೆಷ್ಟು; ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಮೀಸಲಿಸಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮೇಲ್ಕಂಡ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡದೇ ಇರುವ ಸರ್ಕಾರದ ಕ್ರಮದಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಭರ್ತಿ ಮಾಡಲು ಸರ್ಕಾರ ಅನುಮತಿ ನೀಡದೇ ಇರಲು ಕಾರಣವೇನು ?

## ಮುಂಬಡ್ತಿ ಪಡೆದ ಸಹ ಶಿಕ್ಷಕರಿಗೆ ಕಡಿಮೆ ವೇತನ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೧೭ (೭೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಏಕಕಾಲದಲ್ಲಿ ಶಿಕ್ಷಕರಾಗಿ ನೇಮಕಗೊಂಡವರಲ್ಲಿ ಕೆಲವರು ಮುಂಬಡ್ತಿ ಪಡೆದು ಪ್ರೌಢ ಶಾಲೆಗಳಲ್ಲಿ ಸಹ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಪ್ರಾಥಮಿಕ ಶಾಲೆ ಶಿಕ್ಷಕರಿಗಿಂತ ಕಡಿಮೆ ವೇತನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಎಷ್ಟು ಮಂದಿ ಬೋಧಕರು, ಯಾವ ಸಮಯದಿಂದ ಕಡಿಮೆ ವೇತನ ಪಡೆಯುತ್ತಿದ್ದಾರೆ ; ಮಾಸಿಕ ಎಷ್ಟು ಕಡಿಮೆ ವೇತನ ಪಡೆಯುತ್ತಿದ್ದಾರೆ (ವಿವರ ನೀಡುವುದು) ;

(ಇ) ಮುಂಬಡ್ತಿ ಪಡೆದು ಪ್ರೌಢ ಶಾಲೆಗಳಿಗೆ ಬಂದಿರುವ ಸಹ ಶಿಕ್ಷಕರಿಗೆ ಈ ರೀತಿ ಕಡಿಮೆ ವೇತನ ಪಾವತಿಸಲು ಕಾರಣವೇನು (ವಿವರ ನೀಡುವುದು) ;

(ಈ) ಯಾವ ಕಾಲಮಿತಿಯಲ್ಲಿ ಸದರಿ ವೇತನ ವ್ಯತ್ಯಾಸವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತದೆ (ವಿವರ ನೀಡುವುದು) ?

## ನಿವೃತ್ತ ಶಿಕ್ಷಕರಿಗೆ ಗೌರವಧನ ಪರಿಷ್ಕರಣೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೬೧೮ (೭೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರು ಶೈಕ್ಷಣಿಕ ಸಾಲಿನ ಮಧ್ಯಭಾಗದಲ್ಲಿ ನಿವೃತ್ತಿ ಹೊಂದಿದ ನಂತರ ಅದೇ ಶಾಲಾ ಕಾಲೇಜುಗಳಲ್ಲಿ ಸದರಿ ಶೈಕ್ಷಣಿಕ ಸಾಲು ಪೂರ್ಣಗೊಳ್ಳುವವರೆವಿಗೂ ಸೇವೆ ಸಲ್ಲಿಸಲು ಬಯಸಿ ಇಲಾಖಾ ಅಧಿಕಾರಿಗಳಿಗೆ ಕೋರಿಕೆ ಸಲ್ಲಿಸಿದರೆ, ಅಂತಹವರಿಗೆ ಸದರಿ ಸಾಲಿನ ಅಂತ್ಯದವರೆವಿಗೆ ಸೇವೆ ಸಲ್ಲಿಸಲು ಅವಕಾಶ ನೀಡಲಾಗುತ್ತಿದೆಯೇ ;

(ಆ) ಹಾಗಾದರೆ, ಪ್ರೌಢಶಾಲೆ ಹಾಗೂ ಪದವಿಪೂರ್ವ ಶಿಕ್ಷಣದಲ್ಲಿ ಸೇವೆ ಸಲ್ಲಿಸಲು ಬಯಸುವವರಿಗೆ ಮಾಸಿಕ ಎಷ್ಟು ಗೌರವಧನ ನೀಡಲಾಗುತ್ತಿದೆ; (ವಿವರ ನೀಡುವುದು)

(ಇ) ಸದರಿ ನಿವೃತ್ತ ಬೋಧಕರಿಗೆ ನೀಡುತ್ತಿರುವ ಗೌರವಧನವನ್ನು ಸರ್ಕಾರ ಪರಿಷ್ಕರಣೆ ಮಾಡುವುದೆ ;

(ಈ) ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರು ಶೈಕ್ಷಣಿಕ ಸಾಲಿನ ಮಧ್ಯಭಾಗದಲ್ಲಿ ನಿವೃತ್ತಿ ಹೊಂದಿದಾಗ ಸದರಿ ಶಾಲೆ ಕಾಲೇಜುಗಳಲ್ಲಿ ಶೈಕ್ಷಣಿಕ ಸಾಲಿನ ಅಂತ್ಯದವರೆವಿಗೆ ಸೇವೆ ಸಲ್ಲಿಸಲು ಕೋರಿಕೆ ಸಲ್ಲಿಸುವ ಬೋಧಕರಿಗೂ ಸರ್ಕಾರ ಅನುಮತಿ ನೀಡುವುದೇ ?

## ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ತೆರವಾದ ಬೋಧಕ/ ಬೋಧಕೇತರ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೧೯ (೭೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಇದುವರೆವಿಗೂ ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಬೋಧಕ/ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯ ಹಾಗೂ ವರ್ಗವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕೆಲವು ವಿಷಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಹೆಚ್ಚಳವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ರೀತಿಯಾಗಿ ಯಾವ ಯಾವ ವಿಷಯಗಳಲ್ಲಿ ಎಷ್ಟು ಕಾಲೇಜುಗಳಲ್ಲಿ ಯಾವ ಸಾಲಿನಿಂದ ವಿದ್ಯಾರ್ಥಿಗಳು ಹೆಚ್ಚಿನ ಪ್ರವೇಶ ಪಡೆಯುತ್ತಿದ್ದಾರೆ ; (ವಿವರಗಳೊಡನೆ)

(ಉ) ಸದರಿ ಕಾಲೇಜುಗಳಿಂದ ಹುದ್ದೆ ಮಂಜೂರಾತಿಗೆ ಕೋರಿಕೆಗಳು ಬಂದಿಲ್ಲವೆ ; ಬಂದಿದ್ದರೆ, ಯಾವ ವಿಷಯಗಳಲ್ಲಿ ಯಾವ ಕಾಲೇಜಿಗೆ ಎಷ್ಟು ಹುದ್ದೆಗಳ ಮಂಜೂರಾತಿಗೆ ಇದುವರೆವಿಗೂ ಕೋರಿಕೆಗಳು ಬಂದಿವೆ ; (ವಿವರಗಳೊಡನೆ)

(ಊ) ಸದರಿ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

## ಸರ್ಕಾರಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳಲ್ಲಿ ಪ್ರಯೋಗಾಲಯಗಳಿಗೆ ಮೂಲಭೂತ ಸೌಲಭ್ಯಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೨೦ (೭೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೬ ರಿಂದ ಇದುವರೆವಿಗೆ ರಾಜ್ಯದ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಎಷ್ಟು ಕಡೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಷಯವನ್ನು ತೆರೆಯಲಾಗಿದೆ; (ಜಿಲ್ಲಾವಾರು ವಿವರ ನೀಡುವುದು) ;

(ಆ) ಸದರಿ ಕಾಲೇಜುಗಳ ಪ್ರಯೋಗಾಲಯಕ್ಕೆ ಉಪಕರಣ ಹಾಗೂ ರಾಸಾಯನಿಕ ವಸ್ತುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದರೆ, ಎಷ್ಟು ಕಾಲೇಜುಗಳಲ್ಲಿ ಪ್ರಯೋಗಾಲಯದ ಮೂಲಭೂತ ಸಮಸ್ಯೆ ಇದೆ; (ವಿವರ ನೀಡುವುದು)

(ಇ) ಸದರಿ ಕಾಲೇಜುಗಳ ಪ್ರಯೋಗಾಲಯಕ್ಕೆ ಅಗತ್ಯವಿರುವ ಉಪಕರಣ ಮತ್ತು ರಾಸಾಯನಿಕ ವಸ್ತುಗಳನ್ನು ಕೂಡಲೇ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಕಲಾವಿದರು, ತಂತ್ರಜ್ಞರು ಮತ್ತು ಕಾರ್ಮಿಕರುಗಳಿಗೆ ವಸತಿ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೬೨೧ (೭೮೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜೀವ್‌ಗಾಂಧಿ ವಸತಿ ನಿಗಮ ಅಥವಾ ಮತ್ಯಾವುದಾದರೂ ಸಂಸ್ಥೆ ಮೂಲಕ ಕನ್ನಡ ಚಲನಚಿತ್ರ, ರಂಗಭೂಮಿ ಮತ್ತು ಕಿರುತೆರೆ ವಲಯಗಳ ಕಲಾವಿದರು, ತಂತ್ರಜ್ಞರು ಮತ್ತು ಕಾರ್ಮಿಕರುಗಳಿಗೆ 'ವಸತಿ ಯೋಜನೆ' ಗಳನ್ನು ಸರ್ಕಾರ ರೂಪಿಸಿದೆಯೇ ;

(ಆ) ಇದ್ದಲ್ಲಿ, ವಿವರಗಳನ್ನು ನೀಡುವುದು ;

(ಇ) ರೂಪಿಸದಿದ್ದಲ್ಲಿ, ಯೋಜನೆಗಳನ್ನು ಸರ್ಕಾರ ರೂಪಿಸುವುದೇ ?

## ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೨ (೭೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿತರಿಸಲು ಸೈಕಲ್ ಟೆಂಡರ್ ಕರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸೈಕಲ್‌ಗಳ ಗುಣಮಟ್ಟದ ಬಗ್ಗೆ ಸರ್ಕಾರದ ನಿಲುವೇನು ; ಭಾಗವಹಿಸಿದ ಸಂಸ್ಥೆಗಳ ವಿವರ ನೀಡುವುದು, ಹೆಚ್ಚುವರಿ ಕಂಪನಿಗಳು ಭಾಗವಹಿಸುವುದಕ್ಕೆ ಹಾಗೂ ಯಾವುದಾದರೂ ನಿಭಂದನೆಗಳನ್ನು ಬದಲಾಯಿಸುವುದಕ್ಕೆ ಸರ್ಕಾರವನ್ನು ಕೋರಲಾಗಿತ್ತೆ ;

(ಆ) ಈ ಸಾಲಿನ ಸೈಕಲ್ ಖರೀದಿಗೆ ಮಾಡಲಾದ ವೆಚ್ಚದ ವಿವರ ನೀಡುವುದು ; ಪ್ರತಿ ಸೈಕಲ್ ದರ ಹಾಗೂ ವಿತರಿಸಿದ ಕಂಪನಿಗಳ ವಿವರ ಹಾಗೂ ಈ ಸಾಲಿನಲ್ಲಿ ಒಟ್ಟು ವಿತರಣೆಯಾದ ಸೈಕಲ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಯಾವ ಯಾವ .ಕಂಪನಿಗಳು ಸೈಕಲ್ ವಿತರಿಸಲು ಆಯ್ಕೆಯಾಗಿದ್ದವು ? (ಕಂಪನಿಗಳ ಹೆಸರು ಮತ್ತು ವಿವರ ನೀಡುವುದು)

## ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಶೌಚಾಲಯಗಳ ನಿರ್ಮಾಣ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೨೩ (೮೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಿರ್ಮಲ ಭಾರತ ಅಭಿಯಾನ ಯೋಜನೆಯಡಿಯಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗುತ್ತಿದೆ ; ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಆ) ನಿರ್ಮಲ ಭಾರತ ಅಭಿಯಾನದಡಿ ನಿರ್ಮಿಸುವ ಶೌಚಾಲಯಗಳಿಗೆ ನೀಡುವ ಪ್ರೋತ್ಸಾಹಧನ ಎಷ್ಟು ; ಈವರೆಗೆ ಬಳ್ಳಾರಿ ಜಿಲ್ಲೆಗೆ ಎಷ್ಟು ಪ್ರೋತ್ಸಾಹದ ಹಣ ಬಿಡುಗಡೆಗೊಳಿಸಲಾಗಿದೆ? (ಗ್ರಾಮ ಪಂಚಾಯತ್‌ವಾರು ತಾಲ್ಲೂಕುವಾರು ವಿವರ ನೀಡುವುದು)

## ಮಹಿಳೆಯರ ಮತ್ತು ಅಪ್ರಾಪ್ತ ಹೆಣ್ಣು ಮಕ್ಕಳ ಅಪಹರಣ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೨೪ (೮೦೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮಹಿಳೆಯರ ಮತ್ತು ಅಪ್ರಾಪ್ತ ಹಾಗೂ ಪ್ರಾಪ್ತ ಹೆಣ್ಣು ಮಕ್ಕಳ ಅಪಹರಣ ಮತ್ತು ಕಣ್ಮರೆಯಾದ ಪ್ರಕರಣಗಳೆಷ್ಟು ;

(ಆ) ಇದರಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಿ ಮಹಿಳೆಯರನ್ನು ಮತ್ತು ಅಪ್ರಾಪ್ತ, ಪ್ರಾಪ್ತ ಹೆಣ್ಣು ಮಕ್ಕಳನ್ನು ರಕ್ಷಿಸಲಾಗಿದೆ ;

(ಇ) ಹಲವು ಪ್ರಕರಣಗಳು ಪತ್ತೆಯಾಗದೆ ಇರಲು ಕಾರಣಗಳೇನು? (ವಿವರ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಕೇಂದ್ರದಿಂದ ಬರುವ ಅನುದಾನ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):–**

೬೨೫ (೮೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ ಪ್ರತಿ ವರ್ಷ ನೀಡುವ ಅನುದಾನವೆಷ್ಟು ;

(ಆ) ಯಾವ–ಯಾವ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದ ಅನುದಾನ ಬಳಕೆಯಾಗುತ್ತಿದೆ ;

(ಇ) ನಗರ ಅಥವಾ ಗ್ರಾಮೀಣ ಎಂಬುದಾಗಿ ವಿಂಗಡಿಸಿ ಅನುದಾನ ಬಿಡುಗಡೆ ಮಾಡಲಾಗುವುದೇ ? (ಹಾಗಿದ್ದಲ್ಲಿ, ತಾಲ್ಲೂಕುವಾರು, ಜಿಲ್ಲಾವಾರು, ಪೂರ್ಣ ಮಾಹಿತಿ ನೀಡುವುದು)

## ವಸತಿ ಯೋಜನೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):–**

೬೨೬ (೮೦೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಡವರಿಗೆ ಮನೆಗಳನ್ನು ನೀಡುವ ಬಗ್ಗೆ ಇಲಾಖೆಯ ಮಾನದಂಡವೇನು ; (ಗ್ರಾಮೀಣ ಹಾಗೂ ನಗರಗಳ ಪೂರ್ಣ ವಿವರ ನೀಡುವುದು)

(ಆ) ಹಿಂದುಳಿದ ವರ್ಗಗಳಿಗೆ ಅಥವಾ ಬೇರೆ ಬೇರೆ ಜಾತಿ ಆಧಾರದ ಮೇಲೆ ಮನೆ ನೀಡುವ ಕಾರ್ಯಕ್ರಮವಿದೆಯೆ ;

(ಇ) ಹಿಂದಿನ ಸರ್ಕಾರಗಳಲ್ಲಿ ಬಡ ನೇಕಾರರಿಗೆ, ಕೂಲಿ ಕಾರ್ಮಿಕರಿಗೆ, ಬೀಡಿ ಕಟ್ಟುವವರಿಗೆ ಹೀಗೆ ಕೆಲವು ನಿಯಮ ಮಾಡಿ ಮನೆಗಳನ್ನು ನೀಡಲಾಗುತ್ತಿತ್ತೆ ;

(ಈ) ಇತ್ತೀಚಿನ ದಿನಗಳನ್ನು ಬಡ ನೇಕಾರ ಬಂಧುಗಳಿಗೆ ಉಚಿತ ಮನೆ ನೀಡದಿರಲು ಕಾರಣವೇನು ?

## ವಿಕಲಚೇತನರ ಮತ್ತು ಹಿರಿಯ ನಾಗರೀಕರಿಗೆ ಸೌಲಭ್ಯಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):–**

೬೨೭ (೮೦೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಸೌಲಭ್ಯ ನೀಡಲು ಇರುವ ಮಾನದಂಡವೇನು ;

(ಆ) ಯಾವ–ಯಾವ ಜಿಲ್ಲೆಯಲ್ಲಿ ಈ ಸೌಲಭ್ಯ ಪೂರ್ಣ ಮಟ್ಟದಲ್ಲಿ ದೊರೆಕಿರುತ್ತದೆ ;

(ಇ) ವಿಕಲಚೇತನ ಬಂಧುಗಳು ಈಗಿರುವ ಸೌಲಭ್ಯಕ್ಕಿಂತ ಇನ್ನು ಹೆಚ್ಚಿನ ಬೇಡಿಕೆ ಸಲ್ಲಿಸಿರುವರೆ ;

(ಈ) ಹಿರಿಯ ನಾಗರೀಕರ ವಯಸ್ಸಿನ ಮಿತಿಯನ್ನು ಕಡಿಮೆ ಮಾಡಲು ಸರ್ಕಾರ ಯೋಚಿಸಿದೆಯೇ ? (ಈ ವರ್ಷದ ಆಯವ್ಯಯದಲ್ಲಿ ಖರ್ಚು ಮಾಡಿರುವ ಬಗ್ಗೆ ವಿವರ ಕೊಡುವುದು)

-6 B/B

## ಅಬಕಾರಿ ಇಲಾಖೆಯಲ್ಲಿ ನೀರಾ ತರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು):-**

೬೨೮ (೮೦೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಬಕಾರಿ ಇಲಾಖೆಯಲ್ಲಿ ಹಿಂದೆ ನೀರಾ ಅಥವಾ ಸೇಂದಿ ತಯಾರು ಮಾಡಲು ಹಾಗೂ ಮಾರಾಟ ಮಾಡಲು ಅನುಮತಿ ನೀಡಲಾಗಿತ್ತೇ ;

(ಆ) ಆರೋಗ್ಯ ದೃಷ್ಟಿಯಿಂದ ಈ ಸೇವನೆ ಬಗ್ಗೆ ಕೊಟ್ಟ ವರದಿಗಳೇನು ;

(ಇ) ಇತ್ತೀಚಿನ ದಿನಗಳಲ್ಲಿ ಯಾವ-ಯಾವ ಜಿಲ್ಲೆಯಲ್ಲಿ ಅನುಮತಿ ನೀಡಲಾಗಿದೇ ;

(ಈ) ಎಲ್ಲಾ ಜಿಲ್ಲೆಗಳಲ್ಲಿ ಈ ನೀರಾ ಜಾರಿಗೆ ತರಲು ಸರ್ಕಾರ ಯೋಚಿಸಿರುವುದೇ ;

(ಉ) ಯಾವಾಗ ಪ್ರಾರಂಭ ಮಾಡಲಾಗುವುದು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೨೯ (೭೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರುವ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಭಾಗದಲ್ಲಿ ಪ್ರಾಥಮಿಕ, ಪ್ರೌಢಶಾಲೆ, ಪದವಿ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರ ಕೊಳಚೆ ಪ್ರದೇಶದ ಮನೆಗಳು

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೩೦ (೭೯೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿಷ್ಠಿತ ಬೆಂಗಳೂರು ನಗರದ ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿರುವ ಮನೆ ರಹಿತ ಕುಟುಂಬಗಳು ಎಷ್ಟು ;

(ಆ) ಬೆಂಗಳೂರು ನಗರದಲ್ಲಿ ಕೊಳಚೆ ನಿರ್ಮೂಲನಾ ಅಭಿವೃದ್ಧಿ ಮಂಡಳಿಯಿಂದ ಯಾವ ಯಾವ ಸ್ಥಳಗಳಲ್ಲಿ ಮನೆಗಳನ್ನು ನಿರ್ಮಿಸಲಾಗಿದೆ ;

(ಇ) ಎಷ್ಟು ಮನೆಗಳನ್ನು ಬಡ ಕುಟುಂಬಗಳಿಗೆ ಹಂಚಿಕೆ ಮಾಡಲಾಗಿದೆ; (ಕುಟುಂಬಗಳ ವಿವರಗಳನ್ನು ನೀಡುವುದು)

(ಈ) ಪ್ರಸಕ್ತ ಸಾಲಿನಲ್ಲಿ ಕಡುಬಡವರಿಗೆ ಮನೆಗಳನ್ನು ಹಂಚುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೩೧ (೭೯೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ವರದಿಯಾದ ಹೆಣ್ಣು ಮಕ್ಕಳ ದೌರ್ಜನ್ಯ ಪ್ರಕರಣಗಳು ಎಷ್ಟು ;

(ಆ) ಅತ್ಯಂತ ಅನಿಷ್ಟ ಹಾಗೂ ಹೀನಾಯ ಕೃತ್ಯಗಳಾದ ಹೆಣ್ಣು ಮಕ್ಕಳ ಮೇಲಿನ ಮಾನಭಂಗ ಹಾಗೂ ಇನ್ನಿತರ ದೌರ್ಜನ್ಯಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಪ್ರಸಕ್ತ ಅಸ್ತಿತ್ವದಲ್ಲಿರುವ ರಾಜ್ಯ ಮಹಿಳಾ ಆಯೋಗಕ್ಕೆ ಹೆಚ್ಚಿನ ಅಧಿಕಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಹೈದರಾಬಾದ್ ಕರ್ನಾಟಕದ ೬ ಜಿಲ್ಲೆಗಳಲ್ಲಿ ಉದ್ಯೋಗ ಖಾತ್ರಿ ಯೋಜನೆ

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೩೨ (೭೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಹೈದರಾಬಾದ್ ಕರ್ನಾಟಕದ ೬ ಜಿಲ್ಲೆಗಳಲ್ಲಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೈಗೊಂಡ ಕಾರ್ಯಕ್ರಮಗಳೇನು ;

(ಆ) ಈ ಯೋಜನೆಯಡಿ ಸೃಷ್ಟಿಸಲಾದ ಮಾನವ ದಿನಗಳು ಎಷ್ಟು ; ಹಾಗೂ ಸೃಷ್ಟಿಸಲಾದ ಸಾರ್ವಜನಿಕ ಆಸ್ತಿ ವಿವರ ನೀಡುವುದು ;

(ಇ) ಈ ಯೋಜನೆಯಡಿ ಸಾರ್ವಜನಿಕ ಹಣ ದುರುಪಯೋಗವಾದ ಪ್ರಕರಣಗಳು ಎಷ್ಟು ?

## ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೩ (೭೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳ ಅವಧಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳಿಗಾಗಿ ಬಂದ ಒಟ್ಟು ಅನುದಾನ ಹಾಗೂ ಈ ಯೋಜನೆಗಳಿಗೆ ರಾಜ್ಯ ಸರ್ಕಾರದ ಪಾಲು ಎಷ್ಟು (ಯೋಜನಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಆ) ಈ ಯೋಜನೆಗಳಡಿಯಲ್ಲಿ ಕೈಗೊಂಡ ಕಾಮಗಾರಿಗಳು, ಕಾರ್ಯಕ್ರಮಗಳು, ವಿನಿಯೋಗಿಸಿದ ಅನುದಾನ ಎಷ್ಟು (ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು) ;

(ಇ) ಆರ್ಥಿಕವಾಗಿ ದುರ್ಬಲವಾಗಿರುವ ಎಲ್ಲಾ ಸಮುದಾಯದವರಿಗೆಂದು ನೀಡಿದ ಕೇಂದ್ರದ ಅನುದಾನವನ್ನು ರಾಜ್ಯ ಸರ್ಕಾರವು ಕೆಲವು ಸಮುದಾಯದವರಿಗಷ್ಟೇ ವಿನಿಯೋಗಿಸುತ್ತಿರುವುದು ನಿಜವೇ (ಹಾಗಿದ್ದಲ್ಲಿ, ಕಾರಣ ಸಹಿತ ಯೋಜನೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು) ?

## ಬೀದಿ ಬದಿಯಲ್ಲಿ ವಾಸವಾಗಿರುವವರಿಗೆ ವಸತಿ ಸೌಲಭ್ಯ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೪ (೭೪೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಬೆಂಗಳೂರು ನಗರ ಸೇರಿದಂತೆ ರಾಜ್ಯದ ಹಲವು ನಗರ ಪ್ರದೇಶದಲ್ಲಿ ವಸತಿಯಿಲ್ಲದೇ ರಸ್ತೆ ಬದಿ, ಅಂಗಡಿಗಳ ಜಗುಲಿಯಲ್ಲಿ ರಾತ್ರಿ ವೇಳೆ ಮಲಗುವವರ ಅಂದಾಜು ಸರ್ಕಾರಕ್ಕಿದೆಯೇ ; ಇದ್ದಲ್ಲಿ, ನಗರವಾರು ಪ್ರತ್ಯೇಕ ಮಾಹಿತ ಒದಗಿಸುವುದು ;

(ಆ) ಇಂತಹ ನಿರ್ಗತಿಕರಲ್ಲಿ ಚಳಿಗಾಳಿ, ಮಳೆಯಿಂದ ಕಾಯಿಲೆಗಳಿಗೆ ತುತ್ತಾಗಿ ಮರಣ ಹೊಂದಿದವರ ಸಂಖ್ಯೆ ಎಷ್ಟು (ವಿವರ ಒದಗಿಸುವುದು) ;

(ಇ) ಇಂತಹ ನಿರ್ಗತಿಕರಿಗೆ ಸೂರು ಒದಗಿಸುವ ನಿಟ್ಟಿನಲ್ಲಿ ಯಾವುದಾದರೂ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆಯೇ (ಹಾಗಿದ್ದಲ್ಲಿ, ಈ ಕುರಿತ ಪೂರ್ಣ ಮಾಹಿತಿ ಈ ನಿಟ್ಟಿನಲ್ಲಿ ಇದುವರೆಗಿನ ಪ್ರಗತಿಯ ಮಾಹಿತಿ ಒದಗಿಸುವುದು) ?

## ನಾಗರ ಕೆರೆ ಬಡಾವಣೆಯ ನಿವೇಶನಗಳು

**ಡಾ॥ ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೩೫ (೭೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕು, ಹೊಳವನಹಳ್ಳಿ ಗ್ರಾಮದಲ್ಲಿರುವ ನಾಗರ ಕೆರೆ ಬಡಾವಣೆಯಲ್ಲಿರುವ ನಿವೇಶನಗಳ ಸಂಖ್ಯೆ ಎಷ್ಟು ;

(ಆ) ಸದರಿ ನಿವೇಶನಗಳನ್ನು ಎಷ್ಟು ಮಂದಿ ಫಲಾನುಭವಿಗಳಿಗೆ ಹಂಚಲಾಗಿದೆ ;

(ಇ) ಸದರಿ ನಿವೇಶನಗಳಲ್ಲಿ ಎಷ್ಟು ಮಂದಿ ಮನೆಗಳನ್ನು ನಿರ್ಮಿಸಿರುತ್ತಾರೆ (ಹೆಸರು, ಜಾತಿವಾರು ಮಾಹಿತಿ ನೀಡುವುದು) ;

(ಈ) ಹಂಚಿಕೆ ಮಾಡಲು ಬಾಕಿಯಿರುವ ಫಲಾನುಭವಿಗಳ ಸಂಖ್ಯೆ ಎಷ್ಟು (ಹೆಸರುಗಳುಳ್ಳ ಮಾಹಿತಿ ತಿಳಿಸುವುದು) ?

## ಗ್ರಂಥಾಲಯ ಸಹಾಯಕರ ವೇತನ ಪರಿಷ್ಕರಣೆ

**ಶ್ರೀ ಆರ್.ಕೆ. ಸಿದ್ದರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೩೬ (೭೦೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ : ೦೧–೦೪–೧೯೯೮ ರಿಂದ ಪೂರ್ವಾನ್ವಯವಾಗುವಂತೆ, ಏಪ್ರಿಲ್ ೨೦೦೬ರಲ್ಲಿ ಸರ್ಕಾರಿ ಕಾಲೇಜ್ ಗ್ರಂಥಾಲಯ ಸಹಾಯಕರಿಗೆ ವೇತನ ಪರಿಷ್ಕರಣೆಯಾಗಿದ್ದು, ಅನುದಾನಿತ ಪದವಿ ಕಾಲೇಜುಗಳ ಗಂಥಾಲಯ ಸಹಾಯಕರಿಗೆ ಇದುವರೆವಿಗೂ ವೇತನ ಪರಿಷ್ಕರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವೇತನ ಪರಿಷ್ಕರಣೆಯಾಗದಿರಲು ಇರುವ ತೊಂದರೆಯೇನು ; ಇದುವರೆಗೂ ಸರ್ಕಾರ ಕೈಗೊಂಡ ಕ್ರಮವೇನು (ವಿವರ ನೀಡುವುದು) ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

---

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 03367/1000 ಪ್ರತಿಗಳು/2–7–2014